ವಿಜಯಪುರ | ಸಂಪುಟ 04 | ಸಂಚಿಕೆ 059 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಏಪ್ರಿಲ್, 21, 2026



"ಕೃಷ್ಣ ಮೇಲ್ದಂಡೆ ಯೋಜನೆ ಭೂ ಸ್ವಾಧೀನಕ್ಕೆ ಒಳಪಡುವ ಸಂತ್ರಸ್ತರಿಗೆ ನೆರವಾಗಲು ಏಪ್ರಿಲ್ ನಿಂದ ಜುಲೈ 2026ರ ವರೆಗೆ ಲೋಕ ಅದಾಲತ್ ನಡೆಸಲಾಗುತ್ತಿದ್ದು, ಸಂತ್ರಸ್ತರು ಇದರ ಸದುಪಯೋಗ ಪಡೆದುಕೊಳ್ಳಬೇಕು."

■ ಎಂ. ಬಿ. ಪಾಟೀಲ
ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವರು

## ಬಸವಣ್ಣ ವಿಶ್ವ ಭ್ರಾತೃತ್ವ ಸಾರಿದ ಶರಣ : ಮೌಲಾಲಿ

■ ಉದಯರಶ್ಮಿ ದಿನಪತ್ರಿಕೆ



**ಮುಸ್ಲಿಂ ಕುಟುಂಬದಿಂದ ಕಳೆದ ನಾಲ್ಕು ವರ್ಷಗಳಿಂದ ಬಸವ ಜಯಂತಿ ಆಚರಣೆ**

ಬೆಂಗಳೂರು: ದಲಿತ ಬಲಿತ ಎಂಬ ಭೇದ ಬೇಡ, ಮನುಜರೆಲ್ಲ ಒಂದೇ ಕುಲ ಎಂಬ ತತ್ವದಡಿ ವಿಶ್ವ ಭ್ರಾತೃತ್ವ ಸಾರಿದ ಮಹಾನ್ ಮಾನವತಾವಾದಿ ಶರಣ ಜಗಜ್ಯೋತಿ ಬಸವಣ್ಣ ಎಂದು ಆರಕ್ಷಕ ಮೌಲಾಲಿ ಆಲಗೂರ ಹೇಳಿದರು.

ಬೆಂಗಳೂರಿನ ಆಡುಗೋಡಿ ಪೊಲೀಸ್ ಗೃಹದಲ್ಲಿರುವ ಆರಕ್ಷಕ ಮೌಲಾಲಿ ಶ್ವಾನದಳದಲ್ಲಿ ಹೆಡ್ ಕಾನ್ಸ್ಟೇಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಧರ್ಮದಲ್ಲಿ ಮುಸ್ಲಿಂನಾದರೂ ಕೂಡ ಪ್ರತಿ ವರ್ಷ ಬಸವ ಜಯಂತಿ ದಿನದಂದು ಬಸವಣ್ಣನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಗೌರವದಿಂದ ನಮಿಸಿ, ಸಕಲರ ಒಳಿತಿಗಾಗಿ ಪ್ರಾರ್ಥಿಸಿ, ತನ್ನ ಮೂರು ಮಕ್ಕಳಿಗೂ ಬಸವಣ್ಣನ ಸಮಸಮಾಜದ ಚಿಂತನೆ ಕುರಿತು ತಿಳಿಸುತ್ತಾರೆ. ಕಳೆದ 4 ವರ್ಷಗಳಿಂದ ಬಸವ ಜಯಂತಿಯನ್ನು ತಮ್ಮ ಮನೆಯಲ್ಲಿಯೇ ಭಕ್ತಿ, ಭಾವ, ಶ್ರದ್ಧೆಯಿಂದ ಆಚರಿಸುತ್ತಾ ಬರುತ್ತಿದ್ದಾರೆ.

12ನೇ ಶತಮಾನದಲ್ಲಿ ಆಳವಾಗಿ ಬೇರೂರಿದ ಜಾತಿ ವ್ಯವಸ್ಥೆ, ಶೋಷಣೆ, ಅಸಮಾನತೆ, ಅಸ್ಪೃಶ್ಯತೆ, ಅನಾಗರಿಕತೆ, ಲಿಂಗ ತಾರತಮ್ಯದ ವಿರುದ್ಧ ವಚನ ಕ್ರಾಂತಿ ಕೈಗೊಂಡ ಬಸವಣ್ಣ, ದಯ, ಕರುಣೆ, ಸಮಾನತೆ, ಸಹಬಾಳ್ವೆ ಪ್ರತಿಪಾದಿಸಿದ್ದಾರೆ. ಜ್ಞಾನ ಭಂಡಾರ ಹೊತ್ತ ಬಸವಣ್ಣ ಒಂದೇ ಜಾತಿ ಧರ್ಮಕ್ಕೆ ಸೀಮಿತವಾದವರಲ್ಲ ಹೀಗಾಗಿ ಇವರ ಜಯಂತಿ ಆಚ–'ರಣೆ ನನಗೆ ನಾಡ ಹಬ್ಬದಂತೆ ಎನ್ನುತ್ತಾರೆ ಮೌಲಾಲಿ.

ಜಯಂತಿ ಆಚ–'ರಣೆಯಲ್ಲಿ ಮಹಮದ್ ಜುಬೇರ, ಮಹಮ್ಮದ್ ಜಯಾನ್, ಖಿತಾಲಸಾಬ, ರೆಹಮಾನ್, ಜುನೇರಾ ಪಾಲ್ಗೊಂಡಿದ್ದರು.

## ಬಸವಣ್ಣನವರ ಚಿಂತನೆಗಳು ಎಂದೆಂದಿಗೂ ಪ್ರಸ್ತುತ

### ವಿಜಯಪುರದಲ್ಲಿ ಜಿಲ್ಲಾಡಳಿತದಿಂದ ಅದ್ದೂರಿ ಬಸವ ಜಯಂತಿ ಕಾರ್ಯಕ್ರಮ | ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: 12ನೇ ಶತಮಾನದಲ್ಲಿ ಅಣ್ಣ ಬಸವಣ್ಣನವರು ಸೇರಿದಂತೆ ಬಸವಾದಿ ಶರಣರ ವಚನಗಳನ್ನು ಡಾ. ಫ.ಗು ಹಳಕಟ್ಟಿಯಂತವರು ಶರಣ–ರ ವಚನಗಳನ್ನು ಬೆಳಕಿಗೆ ತಂದರು. ಈ ಸಮಾಜ–ಕ್ಕೆ ಶರಣರ ಕೊಡುಗೆ ಅಪಾರ. ಬಸವ ನೆಲದಲ್ಲಿ ಬಸವಣ್ಣನವರ ಚಿಂತನೆಗಳು ಈಗಲೂ, ಎಂದೆಂದಿಗೂ ಪ್ರಸ್ತುತವಾಗಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಕಂದಗಲ್ ಶ್ರೀ ಹನುಂತರಾಯ ರಂಗಮಂದಿರದಲ್ಲಿ ಸೋಮವಾರ ಆಯೋಜಿಸಲಾದ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಅಸಮಾನತೆ, ಮೇಲು–ಕೀಳು ಅನಿಷ್ಟ ಪದ್ಧತಿ ಮೂಢನಂಬಿಕೆ ತಾಂಡವವಾಡುತ್ತಿತ್ತು. ನಮ್ಮ ನೆಲದಲ್ಲಿ ಜನಿಸಿದ ಬಸವಣ್ಣ ವಚನಗಳ ಮೂಲಕ ಬಸವಾದಿ ಶರಣರ ಕಾಯಕ ದಾಸೋಹ ಕಲ್ಪನೆಯೊಂದಿಗೆ ಸಾಮಾಜಿಕ ಚಳುವಳಿ ಮಾಡುವ ಮೂಲಕ ಸಮಸಮಾಜದ ಕನಸು ಕಂಡು ಆ ನಿಟ್ಟಿನಲ್ಲಿ ನಡೆದಿದ್ದಾರೆ ಎಂದರು.



"ಕಾರ್ಲಮಾರ್ಕ್ಸ್ ಅಂದು ಕಾಯಕಕ್ಕೆ ಗೌರವ ನೀಡಿದರು. ಅದಕ್ಕಿಂತ ಮುಂಚಿತವಾಗಿ ಬಸವಣ್ಣನವರು ಕಾಯಕ ಹಾಗೂ ದಾಸೋಹಕ್ಕೆ ಗೌರವ ಘನತೆ ನೀಡಿದವರು. ಯಾವುದೇ ಕಾಯಕ ಸಣ್ಣದಲ್ಲ. ಬಸವಣ್ಣ ದಾಸೋಹ ಪರಿಕಲ್ಪನೆ, ಅನುಭವ ಮಂಟಪ ಎಲ್ಲ ವರ್ಗದ ಜನರು ಇದ್ದರು. ಅಲ್ಲಿ ಕಾಯಕವೇ ಮಹತ್ವ ಪಡೆದಿತ್ತು."

■ ಡಾ. ಎಂ.ಬಿ. ಪಾಟೀಲ
ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು



"ಬಸವಣ್ಣನವರು ದಾಸೋಹ ಸಂಸ್ಕೃತಿ ಜಾರಿಗೊಳಿಸಿದರು. ಹಸಿವಿನಿಂದ ಯಾರೂ ಬಳಲಬಾರದು ಎಂದು ಸರ್ಕಾರ ಅನ್ನಭಾಗ್ಯ ಯೋಜನೆ ತಂದಿದ್ದು, ಆ ಯೋಜನೆಯಡಿ ಬಸವಾದಿ ಶರಣರ ಆಶಯವಿದೆ. ಮೌಢ್ಯತೆ ತೊಡೆದು ಹಾಕಲು ಕೆಲಸ ಮಾಡಿದರು. ಹನ್ನೇರಡನೇ ಶತಮಾನದ ಬಸವಣ್ಣ ರಾಜ ತಂತ್ರಜ್ಞ, ವಿಜ್ಞಾನಿಯಾಗಿದ್ದ, ಸಕಲರಿಗೆ ಲೇಸ ಬಯಸುವ ಗುಣಗಳನ್ನು ಬಸವಣ್ಣನವರು ಹೊಂದಿದ್ದರು. ಶಿವಭಕ್ತರಲ್ಲಿ ವ್ಯತ್ಯಾಸ ಕಾಣಲಿಲ್ಲ. ಬಸವಣ್ಣನವರ ವಚನ ಚಳುವಳಿಯಲ್ಲಿ ಕಾಯಕ ದಾಸೋಹ ಮೊದಲ ಆದ್ಯತೆಯಾಗಿತ್ತು. ಅವರೆಲ್ಲರ ವಿಚಾರಧಾರೆಗಳನ್ನು ಅಳವಡಿಸಿಕೊಳ್ಳುವ ಮೂಲಕ ಅರಿವೇ ಗುರು ಎಂದು ಸಾರಿದವರು ಬಸವಣ್ಣನವರು."

■ ಎಚ್.ಟಿ. ಪೋತೆ
ಹಿರಿಯ ಸಾಹಿತಿ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಬಸವಣ್ಣನವರ ವಚನಗಳನ್ನು ಬಹು ಸೊಗಸಾಗಿ ಹಾಡಿದರು.

ಹಿರಿಯ ಸಾಹಿತಿ ಎಚ್.ಟಿ. ಪೋತೆ ಅವರು ಬಸವಣ್ಣನವರ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಮೇಯರ್ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಜಿಲ್ಲಾಧಿಕಾರಿ ಡಾ. ಆನಂದ ಕೆ., ಮಾಜಿ ಶಾಸಕ ರಾಜು ಆಲಗೂರ, ಪಾಲಿಕೆ ಸದಸ್ಯರಾದ ರಾಜು ಮಗಿಮಠ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಘನಶ್ಯಾಮ ತೊಶ್ನಿವಾಲ ಸೇ–ರಿದಂತೆ ವಿವಿಧ ಸಮಾಜದ ಮುಖಂಡರು ಸಾರ್ವಜನಿಕರು ಉಪಸ್ಥಿತರಿದ್ದರು.

ಶ್ರೀದೇವಿ ಭಂಡಾರಿಕರ ವಿವಿಧ ವಚನಗಳನ್ನು ಸುಶ್ರಾವ್ಯವಾಗಿ ಪ್ರಸ್ತುತಪಡಿಸಿದರು.

ಕಾರ್ಯಕ್ರಮ ಬಳಿಕ ಭಗವಂತನ ಮರಣ ನಾಟಕ ಪ್ರದರ್ಶನ ಕಂಡಿತು.

## ಬಸವಣ್ಣರ ಅನುಭವ ಮಂಟಪ ಪರಿಕಲ್ಪನೆಗಳೇ ಸಂವಿಧಾನಕ್ಕೆ ತಳಹದಿ



■ ಉದಯರಶ್ಮಿ ದಿನಪತ್ರಿಕೆ

**ಸಿಂದಗಿಯಲ್ಲಿ ನಡೆದ ಬಸವಣ್ಣನವರ ಜಯಂತ್ಯುತ್ಸವದಲ್ಲಿ ಶಾಸಕ ಅಶೋಕ ಮನಗೂಳಿ ಅಭಿಮತ**

ಸಿಂದಗಿ: 12ನೇ ಶತಮಾನದಲ್ಲಿಯೇ ಅನುಭವ ಮಂಟಪವನ್ನು ಸ್ಥಾಪಿಸಿ ಸಾಮಾಜೋದ್ಧಾರ್ಮಿಕ ಸಮಾನತೆಗೆ ಶ್ರಮಿಸಿದ ಬಸವಣ್ಣನವರ ಅಂದಿನ ಅನುಭವ ಮಂಟಪದ ಪರಿಕಲ್ಪನೆಗಳೇ ಇಂದಿನ ಭಾರತದ ಸಂವಿಧಾನಕ್ಕೆ ತಳಹದಿಯಾಗಿವೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಬಸವೇಶ್ವರ ವೃತ್ತದಲ್ಲಿ ಹಮ್ಮಿಕೊಂಡ ಬಸವಣ್ಣನವರ 893ನೇ ಜಯಂತ್ಯುತ್ಸವದ ಭವ್ಯ ಮೆರವಣಿಗೆಗೆ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಯುಗಪುರುಷ ಬಸವಣ್ಣನವರು ಮನೆಯಿಂದಲೇ ವೈಚಾರಿಕ ಕ್ರಾಂತಿಯನ್ನು ಆರಂಭಿಸಿದರು. ಬಸವಣ್ಣನವರು ವಿಶ್ವದ ಶ್ರೇಷ್ಠ ದಾರ್ಶನಿಕರಲ್ಲಿ ಮುಂಚೂಣಿಯಲ್ಲಿದ್ದವರು. ಎಲ್ಲ ಧರ್ಮಕ್ಕಿಂತ ಕಾಯಕ ಧರ್ಮ ದೊಡ್ಡದು. ಅಹಿಂಸೆಯೇ ಮಾನವ ಧರ್ಮವನ್ನು ದೀರ್ಘಕಾಲ ಬಾಳಿಸಬಲ್ಲದು ಎಂಬುದನ್ನು ಜಗತ್ತಿಗೆ ಸಾರಿದ ಬಸವಣ್ಣ ವಿಶ್ವ ಸಾಂಸ್ಕೃತಿಕ ನಾಯಕರು. ಇವರನ್ನು ರಾಜ್ಯ ಸರ್ಕಾರ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿರುವುದು ನಮಗೆಲ್ಲ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಈ ವೇಳೆ ತಹಶೀಲ್ದಾರ ಕರೆಪ್ಪ ಬೆಳ್ಳಿ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಹಣಮಂತ ಸುಣಗಾರ, ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕಾಧ್ಯಕ್ಷ ಅಶೋಕ ವಾರದ, ಬ್ಲಾಕ್ ಕಾಂಗ್ರೆಸ್ ತಾಲೂಕಾಧ್ಯಕ್ಷ ಸುರೇಶ ಪೂಜಾರ, ಆರ್.ಡಿ.ದೇಸಾಯಿ, ಜಗದೀಶ ಪಟ್ಟಣಶೆಟ್ಟಿ, ಚನ್ನು ವಾರದ, ಬಿ.ಜಿ.ನೆಲ್ಲಗಿ, ಅಶೋಕ ಅಲ್ಲಾಪೂರ, ಬಸವದಳದ ಅಧ್ಯಕ್ಷ ಮಲ್ಲಿಕಾರ್ಜುನ ಅರ್ಜುಣಗಿ, ಸೋಮನಗೌಡ ಬಿರಾದಾರ, ಮುತ್ತು ಮುಂಡೇವಾಡಗಿ, ಎಂ.ಎಂ.ಹಂಗರಗಿ, ಡಾ.ರವಿ ಗೋಲಾ, ಶಾಂತಪ್ಪ ರಾಣಾಗೋಳ, ಜಗದೀಶ ಕಲಬುರ್ಗಿ, ಸುನಂದಾ ಯಂಪೂರೆ, ಶೈನಾಬಿ ಮಸಳಿ, ಮುತ್ತು ಪಟ್ಟಣಶೆಟ್ಟಿ, ಶ್ರೀಮಂತ ಮಲ್ಲೇದ, ಶಿವರಾಜ ಭಾಸಗಿ, ಬಸು ಗುಗ್ಗರಿ, ವಿಶ್ವನಾಥ ಜೋಗುರ ಸೇ–ರಿದಂತೆ ಬಸವಾಭಿಮಾನಿಗಳು ಇದ್ದರು.

## ಜಾತಿ ವ್ಯವಸ್ಥೆ ಇರುವವರೆಗೂ ಬಸವ ತತ್ವಗಳು ಪ್ರಸ್ತುತ: ಸಿಎಂ

ಮೈಸೂರು: ಜಾತಿ ವ್ಯವಸ್ಥೆ ಇರುವವರೆಗೂ ಬಸವಣ್ಣನವರ ತತ್ವಗಳು ಪ್ರಸ್ತುತವಾಗಿರುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಜಿಲ್ಲಾ ಬಸವ ದಳಗಳ ಒಕ್ಕೂಟ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಇಂದು ಸಿಎಂ ಉದ್ಘಾಟಿಸಿ, "2026ರ ಬಸವಶ್ರೀ" ಪ್ರಶಸ್ತಿ ಪ್ರದಾನ ಮಾಡಿದರು.

ಬಸವಣ್ಣನವರ ಆದರ್ಶಗಳನ್ನು ಪಾಲಿಸಿದ ಡಾ.ಸಿದ್ಧರಾಮ ಶರಣರು 2025–26ನೇ ಸಾಲಿನ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿ ಭಾಜನ ಆಗಿರುವುದಕ್ಕೆ ಅಭಿನಂದನೆಗಳನ್ನು ಸಲ್ಲಿಸಿದರು. ಬಸವಣ್ಣನವರು ಸಮಾಜದಲ್ಲಿ ಜಾತಿ ವರ್ಣ ವ್ಯವಸ್ಥೆಗಳ ವಿರುದ್ಧ ಹೋರಾಡಿದರು. ಮೂಢನಂಬಿಕೆಗಳ ವಿರುದ್ಧ ದ್ವನಿ ಎತ್ತಿ, ಕರ್ಮ ಸಿದ್ಧಾಂತವನ್ನು ಅಲ್ಲಗಳೆದಿದ್ದರು. ಸಾವಿರಾರು ವರ್ಷಗಳಿಂದ ಶೋಷಿತ ವರ್ಗಗಳು ಅಕ್ಷರ ಸಂಸ್ಕೃತಿಯಿಂದ ವಂಚಿತವಾಗಿದ್ದರು. ಬಸವಾದಿಶರಣರು ವೈದಿಕ ಧರ್ಮಕ್ಕೆ ಪರ್ಯಾಯವಾಗಿ ಲಿಂಗಾಯತ ಧರ್ಮಕ್ಕೆ ನಾಂದಿ ಹಾಡಿದರು. ವೈದಿಕ ಧರ್ಮದಲ್ಲಿ ಚತುರ್ವರ್ಣ ವ್ಯವಸ್ಥೆಯಿತ್ತು.

ಆದ್ದರಿಂದ 12ನೇ ಶತಮಾನದಲ್ಲಿ ಸಮಾನತೆ, ಮಾನವೀಯತೆಯಿಂದ ಕೂಡಿದ ಲಿಂಗಾಯತ ಧರ್ಮವನ್ನು ಸ್ಥಾಪಿಸಲಾಯಿತು ಎಂದರು.

## ಇಂದು ಅಕ್ಕಮಹಾದೇವಿ ಮಹಿಳಾ ವಿವಿ ಘಟಿಕೋತ್ಸವ

### ಮೂವರು ಮಹಿಳಾ ಸಾಧಕಿಯರಿಗೆ ಗೌರವ ಡಾಕ್ಟರೇಟ್ | 86 ವಿದ್ಯಾರ್ಥಿನಿಯರಿಗೆ ಪಿಎಚ್ಡಿ ಪದವಿ | ವಿವಿ ಕುಲಪತಿ ಪ್ರೊ.ವಿಜಯಾ ಬಿ. ಕೋರಿಶೆಟ್ಟಿ ವಿವರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಇಲ್ಲಿನ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವ ವಿದ್ಯಾನಿಲಯದ 17ನೇ ಘಟಿಕೋತ್ಸವವನ್ನು ಇದೇ ದಿ. 21 ರಂದು ವಿವಿ ಜ್ಞಾನಶಕ್ತಿ ಆವರಣದ ಕ್ರೀಡಾಂಗಣದಲ್ಲಿ ವಿಶೇಷವಾಗಿ ನಿರ್ಮಿಸಿರುವ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ವಿವಿ ಕುಲಪತಿ ಪ್ರೊ.ವಿಜಯಾ ಬಿ. ಕೋ–ರಿಶೆಟ್ಟಿ ಅವರು, ಘಟಿಕೋತ್ಸವ ಕಾರ್ಯಕ್ರಮದ ಕುರಿತು ಸಂಪೂರ್ಣ ವಿವರಣೆ ನೀಡಿದರು.

ಈ ಘಟಿಕೋತ್ಸವದ ಅಧ್ಯಕ್ಷತೆಯನ್ನು ರಾಜ್ಯಪಾಲರು ಹಾಗೂ ಮಹಿಳಾ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳೂ ಆದ ಥಾವರ್ ಚಂದ್ ಗೆಲ್ಹೋಟ್ ವಹಿಸಲಿದ್ದು, ಮುಂಬೈನ ಎಸ್‌ಎನ್‌ಡಿ ಟಿಡಿ ಮಹಿಳಾ ವಿವಿ ಕುಲಪತಿ ಪ್ರೊ.ಉಜ್ವಲಾ ಚಕ್ರದೇವ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಘಟಿ–ಕೋತ್ಸವ ಭಾಷಣ ಮಾಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ, ಕುಲಪತಿ ಪ್ರೊ. ವಿಜಯಾ ಬಿ.ಕೋರಿಶೆಟ್ಟಿ, ಕುಲಸಚಿವ ಶಂಕರಗೌಡ ಸೋಮನಾಳ, ಹಾಗೂ ಮೌಲ್ಯಮಾಪನ ಕುಲಸಚಿವ ಪ್ರೊ. ಬಿ.ಎಲ್.ಲಕ್ಕಣ್ಣವರ ಉಪಸ್ಥಿತರಿರುವರು ಎಂದು ಅವರು ತಿಳಿಸಿದರು.

ಈ ಘಟಿಕೋತ್ಸವದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮೂವರು ಮಹನೀಯರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುವುದು. ಜಾನಪದ ಕ್ಷೇತ್ರದ ಸಾಧನೆಗಾಗಿ ಧಾರವಾಡದ ಶ್ರೀಮತಿ ಪಾರ್ವತೆವ್ವ ಸಿದ್ದಪ್ಪ ಹೊಂಗಲ್, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದ ಸಾಧನೆಗಾಗಿ ಕಲಬುರ್ಗಿಯ ಡಾ.ಸಂಗೀತಾ ಎನ್ ಕಟ್ಟಿಮನಿ, ಉದ್ಯಮ ಮತ್ತು ಸಾಮಾಜಿಕ ಸೇವಾ ಕ್ಷೇತ್ರದ ಸಾಧನೆಗಾಗಿ ಬಾಗಲಕೋಟೆಯ ಶ್ರೀಮತಿ ಆಶಾದೇವಿ ಜಗದೀಶ ಗುಡಗುಂಟಿ ಈ ಮೂವರು ಸಾಧಕಿಯರಿಗೆ ರಾಜ್ಯಪಾಲರು ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿವಿಯಿಂದ ವಿವಿಧ ಸಾಧಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ಗರಿಷ್ಠ ಅಂಕಗಳನ್ನು ಗಳಿಸಿ ತೇರ್ಗಡೆಯಾದ ಒಟ್ಟು 70 ವಿದ್ಯಾರ್ಥಿನಿಯರಿಗೆ 58 ಚಿನ್ನದ ಪದಕ ಮತ್ತು 12 ನಗದು ಪಾರಿತೋಷಕ ಪದಕಗಳನ್ನು ಪ್ರದಾನ ಮಾಡಲಾಗುತ್ತದೆ. ಈ ಘಟಿಕೋತ್ಸವದಲ್ಲಿ ಒಟ್ಟು 13,441 ವಿದ್ಯಾರ್ಥಿನಿಯರು ಪದವಿ ಪಡೆಯಲು ಅರ್ಹರಾಗಿದ್ದಾರೆ. ಹಾಗೆಯೇ 86 ವಿದ್ಯಾರ್ಥಿನಿಯರಿಗೆ ಪಿಎಚ್ ಡಿ ಪದವಿ ಪ್ರದಾನ ಮಾಡಲಾಗುವುದು

ವಿವಿಯ 17ನೇ ಘಟಿಕೋತ್ಸವವನ್ನು ಯಶಸ್ವಿಯಾಗಿ ಸಂಘಟಿಸಲು ಹಲವಾರು ಸಮಿತಿಗಳನ್ನು ರಚಿಸಲಾಗಿದ್ದು, ಎಲ್ಲ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಅವರು ವಿವ–ರಿಸಿದರು.

ಈ ಘಟಿಕೋತ್ಸವನ್ನು ವಿವಿಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಅಕ್ಕ ಟಿವಿ ಯುಟ್ಯೂಬ್ ಚಾನೆಲ್ ಮೂಲಕ ಲೈವ್ ಕವರೇಜ್ ಮಾಡಲಾಗುತ್ತಿದೆ. ರಾಜ್ಯಾದ್ಯಂತ ಇರುವ ಅಕ್ಕಮಹಾದೇವಿ ಮಹಿಳಾ ವಿವಿ ಸಂಲಗ್ನ ಕಾಲೇಜುಗಳ ವಿದ್ಯಾರ್ಥಿನಿಯರು ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ಅಕ್ಕ ಟಿವಿ ಯುಟ್ಯೂಬ್ ನ್ಯೂಸ್ ಚಾನೆಲ್ ಮೂಲಕ ಪ್ರಸಾರವಾಗುವ ಲೈವ್ ವರೇಜ್ ವೀಕ್ಷಿಸುವುದರೊಂದಿಗೆ ಘಟಿಕೋತ್ಸವದಲ್ಲಿ ಆನಲೈನ್ ಮೂಲಕ ಭಾಗವಹಿಸಲಿದ್ದಾರೆ. ಇದಕ್ಕಾಗಿ ಎಲ್ಲಾ ಕಾಲೇಜುಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಹೇಳಿದರು.

ಘಟಿಕೋತ್ಸವದ ಸಭಾಂಗಣದಲ್ಲಿ ಹನ್ನೆರಡು ವರ್ಷದೊಳಗಿನ ಮಕ್ಕಳಿಗೆ ಪ್ರವೇಶವಿರುವುದಿಲ್ಲ. ಸಭಾಂಗಣದಲ್ಲಿ ಕ್ಯಾಮೆರಾ, ಮೊಬೈಲ್, ವಾಟ–ರ್ ಬಾಟಲ್, ಕೊಡೆ, ಕೈಚೀಲ ಮುಂತಾದ ವಸ್ತುಗಳನ್ನು ನಿಷೇಧಿಸಲಾಗಿದೆ. ಘಟಿಕೋತ್ಸವ ಕಾರ್ಯಕ್ರಮ ನಿಗದಿತ ಸಮಯಕ್ಕೆ ಆರಂಭವಾಗುವುದು. ಆಹ್ವಾನಿತರು ಅಂದು ಬೆಳಿಗ್ಗೆ 11.15 ಗಂಟೆಯೊಳಗೆ ಸಭಾಂಗಣದೊಳಗೆ ಬಂದು ಆಸೀನರಾಗಬೇಕೆಂದು ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಕೋರಿದರು.

ಪತ್ರಿಕಾಗೋಷ್ಠಿಯಲ್ಲಿ ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಬಿ.ಎಲ್.ಲಕ್ಕಣ್ಣವರ, ಆರ್ಥಿಕ ಅಧಿಕಾರಿ ರಾಮಣ್ಣ ಅಥಣಿ, ಘಟಿಕೋತ್ಸವ ಸಂಯೋಜನಾಧಿಕಾರಿ ಪ್ರೊ. ರಾಜಕುಮಾರ ಮಾಲಿಪಾಟೀಲ, ಮಾಧ್ಯಮ ಸಮಿತಿ ಅಧ್ಯಕ್ಷ ಪ್ರೊ.ಓಂಕಾರ ಕಾಕಡೆ, ಡಾ.ತಹಮೀನಾ ಕೋಲಾರ, ಸಂದೀಪ್ ನಾಯಕ್ ಮತ್ತಿತರರು ಉಪಸ್ಥಿತರಿದ್ದರು.

### ಅತೀ ಹೆಚ್ಚು ಚಿನ್ನದ ಪದಕ ಪಡೆದ ವಿದ್ಯಾರ್ಥಿನಿಯರು

**ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿವಿ ವಿಜಯಪುರ ಮುಖ್ಯ ಆವರಣದ ವಿದ್ಯಾರ್ಥಿನಿ ಸಭಾ ಮಹ್ಮದ ರಫೀಕ ಕುಡಚಿ ಅವರು ಎಂ.ಎ ಸಮಾಜಶಾಸ್ತ್ರ ವಿಷಯದಲ್ಲಿ ಐದು ಚಿನ್ನದ ಪದಕ ಪಡೆದಿದ್ದಾರೆ. ಕಲಬುರ್ಗಿ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವಿದ್ಯಾರ್ಥಿನಿ ರೇಖಾ ದೊಡವಾಡ ಅವರು ಎಂ.ಎ.ಕನ್ನಡ ವಿಷಯದಲ್ಲಿ, ಅಕ್ಕಮಹಾದೇವಿ ಮಹಿಳಾ ವಿವಿ ವಿಜಯಪುರ ಮುಖ್ಯ ಆವರಣದ ವಿದ್ಯಾರ್ಥಿನಿ ಗೀತಾ ಸಿ.ಕಾಟಿ ಅವರು ಎಂ.ಎ.ಅರ್ಥಶಾಸ್ತ್ರ ವಿಷಯದಲ್ಲಿ ಹಾಗೂ ಶಹಿಸ್ತಾ ತಜೀನ್ ಮಳ್ಳಿ ಎಂ.ಎಸ್ಸಿ ಆಹಾರ ಸಂಸ್ಕರಣೆ ಮತ್ತು ಪೋಷಣೆ ವಿಷಯದಲ್ಲಿ ತಲಾ ಮೂರು ಚಿನ್ನದ ಪದಕಗಳನ್ನು ಪಡೆದಿದ್ದಾರೆ.**

## ಯುಕೆಪಿ ಸ್ವಾಧೀನಕ್ಕೆ ಒಳಪಡುವ ಸಂತ್ರಸ್ತರಿಗಾಗಿ ಲೋಕ ಅದಾಲತ್

■ ಉದಯರಶ್ಮಿ ದಿನಪತ್ರಿಕೆ



**ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿಕೆ**

ವಿಜಯಪುರ: ಕೃಷ್ಣ ಮೇಲ್ದಂಡೆ ಯೋಜನೆ ಭೂ ಸ್ವಾಧೀನಕ್ಕೆ ಒಳಪಡುವ ಸಂತ್ರಸ್ತರಿಗೆ ನೆರವಾಗಲು ಏಪ್ರಿಲ್ ನಿಂದ ಜುಲೈ 2026ರ ವರೆಗೆ ಲೋಕ ಅದಾಲತ್ ನಡೆಲಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು,

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಈ ಲೋಕ ಅದಾಲತ ಆಯೋಜಿಸಿದೆ. ಭೂಸ್ವಾಧೀನ ಪ್ರಕ್ರಿಯೆ ಪ್ರಶ್ನಿಸಿ ಮತ್ತು ಹೆಚ್ಚಿನ ಪರಿಹಾರಕ್ಕಾಗಿ ನ್ಯಾಯಾಲಯದ ಮೊರೆ ಹೋಗಿರುವ ರೈತರು ಈ ಲೋಕ ಅದಾಲತನಲ್ಲಿ ಪಾಲ್ಗೊಂಡು ಪರಸ್ಪರ ಒಪ್ಪಿಗೆ ಮೇರೆಗೆ ಪ್ರಕರಣವನ್ನು ತಕ್ಷಣ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಇದರಿಂದ ನ್ಯಾಯಕ್ಕಾಗಿ ಹಲವಾರು ತಿಂಗಳವರೆಗೆ ನ್ಯಾಯಾಲಯಗಳುಗೆ ಅಲೆದಾಡುವುದು, ವಿಚಾರಣೆಗೆ ಕಾಯುವುದು ತಪ್ಪಲಿದೆ. ಒಂದೇ ದಿನದಲ್ಲಿ ಪ್ರಕರಣ ಇತ್ಯಥ–'ರ್ವಾಗುವುದರಿಂದ ರೈತರ ಅಮೂಲ್ಯ ಸಮಯ ಉಳಿತಾಯವಾಗಲಿದೆ.

ಲೋಕ ಅದಾಲತನಲ್ಲಿ ಪ್ರಕರಣ ಇತ್ಯರ್ಥ ಪ್ರಕ್ರಿಯೆ ಸರಳವಾಗಿದ್ದು, ತಕ್ಷಣ ಇತ್ಯರ್ಥವಾಗುವುದ–ರಿಂದ ರೈತರು ಸಂಕಷ್ಟದಿಂದ ಮುಕ್ತರಾಗಿ ನೆಮ್ಮದಿಯ ಜೀವನ ಸಾಗಿಸಬಹುದಾಗಿದೆ.

ವಿಜಯಪುರ ಒಂದನೇ ಮತ್ತು ಮೂರನೇ ಹೆಚ್ಚುವರಿ ನ್ಯಾಯಾಲಯಗಳಲ್ಲಿ ಏಪ್ರಿಲ್ ನಿಂದ ಮತ್ತು ಮೇ ವರೆಗೆ ಮಧ್ಯಾಹ್ನ 12.30 ರಿಂದ 1.30ರ ವರೆಗೆ ಮತ್ತು ಜೂನ್ ಹಾಗೂ ಜುಲೈ 2026ರ ವರೆಗೆ ಸಂಜೆ 4.45 ರಿಂದ 5.45ರ ವರೆಗೆ ಪ್ರಕರಣಗಳ ಇತ್ಯರ್ಥ ಪ್ರಕ್ರಿಯೆ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಭೂಸ್ವಾಧೀನ ಅಧಿಕಾರಿಗಳ ಕಚೇರಿಗಳನ್ನು ತಕ್ಷಣ ಸಂಪರ್ಕಿಸುವಂತೆ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

# ಕಾರಂಜಾ ಸಂತ್ರಸ್ತ ರೈತರ ಹೋರಾಟಕ್ಕೆ ತಾರ್ಕಿಕ ಅಂತ್ಯ: ಶೀಘ್ರದಲ್ಲೇ ಬೆಂಗಳೂರಿನಲ್ಲಿ ಸಿಎಂ ಸಭೆ



**ಬೀದರ್:** ಕಾರಂಜಾ ಜಲಾಶಯದ ಮುಳುಗಡೆ ಸಂತ್ರಸ್ತ ರೈತರ ದಶಕಗಳ ಹೋರಾಟಕ್ಕೆ ತಾರ್ಕಿಕ ಅಂತ್ಯ ಸಿಗುವ ಭರವಸೆ ಮೂಡಿದ್ದು, ಈ ಕುರಿತು ಶೀಘ್ರದಲ್ಲೇ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಯುವ ಸಾಧ್ಯತೆ ವ್ಯಕ್ತವಾಗಿದೆ.

ಈ ಹಿನ್ನೆಲೆಯಲ್ಲಿ 'ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ'ಯ ಪದಾಧಿಕಾರಿಗಳ ಮಹತ್ವದ ಸಮಾಲೋಚನಾ ಸಭೆ ಶನಿವಾರ ಬೀದರ್ ನಗರದಲ್ಲಿ ನಡೆಯಿತು. ಸಭೆಯಲ್ಲಿ ಮುಂದಿನ ಹೋರಾಟದ ಕಾರ್ಯತಂತ್ರ, ಜಿಲ್ಲಾ ಉಸ್ತುವಾರಿ ಸಚಿವರ ಭೇಟಿಯ ರೂಪುರೇಷೆ ಹಾಗೂ ಬೆಂಗಳೂರಿನ ಸಭೆಗೆ ರೈತ ಪ್ರತಿನಿಧಿಗಳನ್ನು ಸಿದ್ಧಪಡಿಸುವ ಬಗ್ಗೆ ಚರ್ಚೆ ನಡೆಸಲಾಯಿತು.

ಇತ್ತೀಚೆಗೆ ಜಿಲ್ಲೆಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರಂಜಾ ಸಂತ್ರಸ್ತ ರೈತರ ಅಹವಾಲುಗಳನ್ನು ಆಲಿಸಿ, ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ ಉನ್ನತ ಮಟ್ಟದ ಸಭೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಹೋರಾಟಗಾರ ಲಕ್ಷ್ಮಣ ದಸ್ತಿ ಅವರು, "ನಮ್ಮ ಸುದೀರ್ಘ ಹೋರಾಟಕ್ಕೆ ಈಗ ನ್ಯಾಯ ಸಿಗುವ ಆಶಾಭಾವನೆ ಮೂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರ ವಿಶೇಷ ಕಾಳಜಿಯಿಂದ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲು ಸಾಧ್ಯವಾಯಿತು," ಎಂದು ಹೇಳಿದರು.

ಅವರು ಮುಂದುವರಿದು, "ಮುಖ್ಯಮಂತ್ರಿಗಳು ಈಗಾಗಲೇ ರೈತ ಮುಖಂಡರೊಂದಿಗೆ ಎರಡು ಬಾರಿ ಸಭೆ ನಡೆಸಿರುವುದಾಗಿ ತಿಳಿಸಿದ್ದಾರೆ. ಶೀಘ್ರದಲ್ಲೇ ಸಚಿವರೊಂದಿಗೆ ಚರ್ಚಿಸಿ ರೈತ ಪ್ರತಿನಿಧಿಗಳನ್ನು ಬೆಂಗಳೂರಿಗೆ ಆಹ್ವಾನಿಸಿ ಅಂತಿಮ ಸಭೆ ನಡೆಸಲಾಗುವುದು," ಎಂದು ಮಾಹಿತಿ ನೀಡಿದರು.

ಇನ್ನೂ, ಸಭೆಯ ದಿನಾಂಕ ನಿಗದಿಪಡಿಸಲು ಹಾಗೂ ಮುಂದಿನ ಪ್ರಕ್ರಿಯೆಗಳ ಬಗ್ಗೆ ಚರ್ಚಿಸಲು ಸಮಿತಿ ಶೀಘ್ರದಲ್ಲೇ ಸಚಿವ ಈಶ್ವರ ಖಂಡ್ರೆ ಅವರನ್ನು ಭೇಟಿಯಾಗಲಿದ್ದು, ಅವರ ಮೂಲಕ ಬೆಂಗಳೂರಿನ ಸಭೆಯ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಸಮಿತಿಯ ಪ್ರಮುಖರಾದ ವಿನಯ ಕುಮಾರ ಮಾಳಗೆ, ರೋಹನ್ ಕುಮಾರ, ಮಹೇಶ ಗೋರನಾಳ್ಕರ್, ರಾಜಪ್ಪ ಕಮಾಲ್ಪುರೆ, ರಾಜಶೇಖರ ಖೇಣಿ ರಂಜೋಳ, ಮಾದಪ್ಪ ಸಂಗೋಳಗಿ, ಸಂಗಾರೆಡ್ಡಿ, ರೇವಣಪ್ಪ, ಲಕ್ಷ್ಮೀ ಮಾದಪ್ಪ ಹಾಗೂ ವಿದ್ಯಾವತಿ ಸಂಗಾರೆಡ್ಡಿ ಸೇರಿದಂತೆ ಅನೇಕ ರೈತ ಮುಖಂಡರು ಮತ್ತು ಪ್ರತಿನಿಧಿಗಳು ಉಪಸ್ಥಿರಿದ್ದರು.

# ಅಧಿಕಾರಿಗಳು ಅಲೆಮಾರಿ ಸಮುದಾಯಗಳಿಗೆ ನಿಗದಿಪಡಿಸಿದಯೋಜನೆಗಳು ಸರಿಯಾದ ಸಮಯಕ್ಕೆ ತಲುಪಿಸಿ:ಪಲ್ಲವಿ ಜಿ.



**ಬೀದರ:** ಅಲೆಮಾರಿ ಸಮುದಾಯಗಳಿಗೆ ನಿಗದಿಪಡಿಸಿದ ಯೋಜನೆಗಳು ಸರಿಯಾದ ಸಮಯಕ್ಕೆ ಹಾಗು ಕಾಲಮಿತಿಯೊಳಗಾಗಿ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಪ್ರಯತ್ನಿಸುವಂತೆ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವರದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಯೋಜನೆಗಳ ಕುರಿತು ಜಿಲ್ಲಾ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಮತ್ತು ಸಮಾಲೋಚನೆ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಈಗಾಗಲೇ ಸ್ಥಗಿತಗೊಂಡ ಅಲೆಮಾರಿ ಸಮುದಾಯ ಭವನಗಳು ನಿಗಮದಿಂದ ಅನುದಾನ ನೀಡಿ ಪೂರ್ಣಗೊಳಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು. ಹೋದ ವರ್ಷ ಕೂಡ ಏ. 18ರಂದು ನಾನು ಬೀದರ್ ಜಿಲ್ಲಾ ಪ್ರವಾಸ ಕೈಗೊಂಡಿದ್ದೆ. ಆ ಸಂದರ್ಭದಲ್ಲಿ ಬೀದರ್ ಜಿಲ್ಲೆ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಪ್ರವಾಸ ಮಾಡಿ ಅಲೆಮಾರಿ ಸಮುದಾಯದವರ ವಾಸಸ್ಥಳಕ್ಕೆ ಭೇಟಿ ನೀಡಿದ್ದೇನೆ. ಅವರ ಸಮಸ್ಯೆಗಳನ್ನು ತಿಳಿದುಕೊಂಡಿದ್ದೆ. ಇವಾಗ ಕೂಡ ಅಧಿಕಾರಗಳ ಜೊತೆಗೆ ಹೋಗಿ ಪರಿಶೀಲನೆ ಮಾಡಿದ್ದೇನೆ ಎಂದರು.

ಅಲೆಮಾರಿ ಸಮುದಾಯದವರಲ್ಲಿ ಇರುವ ಸಮಸ್ಯೆ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ತೆಗೆದುಕೊಳ್ಳಲು ಈಗಾಗಲೇ ನಾನು ನಮ್ಮ ಸಮಾಜ ಕಲ್ಯಾಣ ಇಲಾಖೆ ಮತ್ತು ಇದಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ನಿರ್ದೇಶನ ನೀಡಿ, ಕಾಲಮಿತಿಯೋಳಗಾಗಿ ಆ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದ್ದೇನೆ ಎಂದು ಅವರು ಹೇಳಿದರು.

ನಾವು ಭೇಟಿ ನೀಡಿದ ಸ್ಥಳಗಳಲ್ಲಿ ಯಾವ ಯಾವ ರೀತಿಯ ಕಾರ್ಯಕಾರಿಗಳನ್ನು ಕೈಗೊಂಡಿದ್ದಾರೆ, ಯಾವ ರೀತಿಯಲ್ಲಿ ಸಮಸ್ಯೆಗಳನ್ನು ಬಗೆಹರಿಸಿದ್ದಾರೆ ಎನ್ನುವುದನ್ನು ಪರಿಶೀಲಿಸಿದ್ದೇನೆ. ಚೌಳಿ ಕಮಾನ್ ಹತ್ತಿರದಲ್ಲಿರುವ ಸಿಂಧೋಳ್ ಮತ್ತು ಮಾಂಗಾರವಾಡಿ 84 ಕುಟುಂಬಗಳಿಗೆ ಅಲಿಯಂಬರ್ ಗ್ರಾಮದಲ್ಲಿ ಎರಡು ಎಕರೆ ಭೂಮಿಯನ್ನು ನಿಗದಿ ಹಾಗೂ ಲೇಔಟ್ ಪ್ಲಾನಿಂಗ್ ಕೂಡ ಮಾಡಿ ಪ್ರಸ್ತಾವನೆ ನಿಗಮಕ್ಕೆ ಕಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಈಗಾಗಲೇ ಎರಡು ಎಕರೆ ಭೂಮಿಯನ್ನು ನಿಗದಿ ಮಾಡಿದ್ದಾರೆ. ಆದರೆ ಲೇಔಟ್ ಪ್ಲಾನಿಂಗ್ ಮಾಡಿ ಪ್ರಸ್ತಾವನೆ ನಿಗಮಕ್ಕೆ ಕಳಿಸಿರುವುದಿಲ್ಲ. ಇದರ ಬಗ್ಗೆ ಚರ್ಚಿಸಿ ಲೇಔಟ್ ಪ್ಲಾನಿಂಗ್ ಮಾಡಿ ಅದಕ್ಕೆ ಎಷ್ಟು ಅನುದಾನ ಬೇಕು ಅಷ್ಟು ನಮ್ಮ ನಿಗಮದಿಂದ ನೀಡುತ್ತೇವೆ ಎಂದು ಭರವಸೆ ನೀಡಿದ್ದೇನೆ. ಈಗಾಗಲೇ ಚೌಳಿ ಕಮಾನ ಹತ್ತಿರ 84 ಕುಟುಂಬಗಳಿಗೆ ಶೌಚಾಲಯಕ್ಕೆ ಸಮಸ್ಯೆಯಾಗುತ್ತಿರುವುದರಿಂದ ಬೀದರ ಮಹಾನಗರ ಪಾಲಿಕೆಯ ಆಯುಕ್ತರಿಗೆ ಕರೆ ಮಾಡಿ ಮೊಬೈಲ್ ಶೌಚಾಲಯವನ್ನು ಒದಗಿಸಲು ಸೂಚಿಸಿದ್ದೇನೆಂದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿಯಾದ ಶಿಲ್ಪಾ ಶರ್ಮಾ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಜಂಟಿ ನಿರ್ದೇಶಕರಾದ ಆನಂದಕುಮಾರ ಏಕಲವ್ಯ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಯೋಗೇಶ, ಎಲ್ಲಾ ತಾಲ್ಲೂಕಿನ ತಹಸೀಲ್ದಾರರು, ಅಲೆಮಾರಿ ಸಮುದಾಯದ ಅನುಷ್ಠಾನ ಸಮಿತಿ ಸದಸ್ಯರಾದ ಪಿ.ಟಿ.ಶ್ಯಾಮ, ಶ್ರೀಮತಿ ರೇಖಾ ರಾಕೇಶ, ಮಹೇಶ, ತಿಪ್ಪಣ್ಣ, ಆಕಾಶ ಸೇರಿದಂತೆ ಅಲೆಮಾರಿ ಸಮಾಜದ ಸದಸ್ಯರುಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ತಿತರಿದ್ದರು.

# ಬಸವಣ್ಣನವರ ತತ್ವಗಳು ಸರ್ವಕಾಲಕ್ಕೂ ಸತ್ಯ: ಎಸ್.ಪಿ ಪ್ರದೀಪ ಗುಂಟಿ



**ಬೀದರ್:** ಬಸವಣ್ಣನವರ ತತ್ವಗಳು ಸರ್ವಕಾಲಕ್ಕೂ ಸತ್ಯವಾಗಿದ್ದು, ಅವರ ಸಂಸದಿಯ ಪದ್ದತಿ ಇಂದು ಇಡೀ ಜಗತ್ತೆ ಆರಾಧಿಸುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ತಿಳಿಸಿದರು.

ಶನಿವಾರ ನಗರದ ಗುಂಪಾ ರಸ್ತೆಯ ಸಿದ್ದಾರೂಢ ಮಠದ ಎದುರು ಬಸವ ಜಯಂತಿ ಉತ್ಸವ ಸಮಿತಿ ಹಮ್ಮಿಕೊಂಡ ಬೃಹತ್ ಕಾರು ರ್ಯಾಲಿಗೆ ಚಾಲನೆ ನೀಡಿ ಮಾತನಾಡಿರುವ ಅವರು, ಧರ್ಮ ರಹಿತ, ಜಾತಿ ರಹಿತ, ಸಮಾಜ ಹಿತ, ಶೋಷಿತ ಸಮುದಾಯವನ್ನು ಮೇಲೆತ್ತಿ ಅಂತರ್ ಜಾತಿ ವಿವಾಹಕ್ಕೆ ಉತ್ತೇಜನ ನೀಡುವ ಮೂಲಕ ಮೇಲು, ಕೀಳು ಎಂಬ ಭೇದ ಸಂಪೂರ್ಣ ನಿರ್ನಾಮ ಮಾಡಿದ ಮಹಾನ ಕ್ರಾಂತಿಯೋಗಿಯಾಗಿರುವರು ಎಂದರು.

ಉತ್ಸವ ಸಮಿತಿಯ ಅಧ್ಯಕ್ಷರಾದ ಡಾ.ರಜನೀಶ ವಾಲಿ ಮಾತನಾಡಿ, ಬೃಹತ್ತಾದ ಈ ಕಾರು ರ್ಯಾಲಿ ಹಮ್ಮಿಕೊಂಡು ಬಸವಣ್ಣನವರು ಕೇವಲ ಲಿಂಗಾಯತರ ಸ್ವತ್ತಲ್ಲ ಎಲ್ಲ ಸಮುದಾಯದ ಆಸ್ತಿ ಎಂಬ ವಿಶಾಲ ಸಂದೇಶ ರವಾನಿಸುವ ಉದ್ದೇಶ ಹೊಂದಿದ್ದು, ಮೂರು ದಿವಸಗಳ ಕಾಲ ನಡೆಯಲಿರುವ ಜಯಂತಿ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಾಂಸ್ಕೃತಿಕ ನಾಯಕನಿಗೆ ಗೌರವ ಸಲ್ಲಿಸಬೇಕಾಗಿದೆ ಎಂದರು.

ಈ ಕಾರು ರ್ಯಾಲಿ ಸಿದ್ದಾರೂಢ ಮಠದ ಮುಂಭಾಗದಿಂದ ಮೈಲೂರ ಕ್ರಾಸ್, ಬೊಮ್ಮಗೊಂಡೇಶ್ವರ್ ವೃತ್ತ, ಬಸವೇಶ್ವರ ವೃತ್ತ, ಮಹಾವೀರ ಚೌಕ್, ಭಗತಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಹರಳಯ್ಯ ಚೌಕ್, ಮೋಹನ್ ಮಾರ್ಕೆಟ್ ಮೂಲಕ ರೋಟ್ರಿ ಸರ್ಕಲ್, ಮಡಿವಾಳ ಚೌಕ್, ಕೇಂದ್ರ ಬಸ್ ನಿಲ್ದಾಣ ಮುಂಭಾಗದಿಂದ ಪಾಪನಾಶ ದೇವಸ್ಥಾನ ವರೆಗೆ ಸಾಗಿತು.

ಈ ಸಂದರ್ಭದಲ್ಲಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಧರ ಹೊಸಳ್ಳಿ, ಖಜಾಂಚಿ ಸಿದ್ರಾಮಯ್ಯ ಸ್ವಾಮಿ, ಗೌರವ ಅಧ್ಯಕ್ಷ ಜಯರಾಜ ಖಂಡ್ರೆ, ಗೌರವ ಸಲಹೆಗಾರರಾದ ಶಿವಶರಣಪ್ಪ ವಾಲಿ, ಬಾಬು ವಾಲಿ, ವೈಜಿನಾಥ ಕಮಠಾಣೆ, ದೀಪಕ ವಾಲಿ, ಸೋಮಶೇಖರ ಪಾಟೀಲ ಗಾದಗಿ, ಬಸವರಾಜ ಪಾಟೀಲ ಬಾಬುರಾವ ಮಲ್ಕಾಪುರೆ, ಶಕುಂತಲಾ ಬೆಲ್ದಾಳೆ ಹಾರೂರಗೇರಿ, ಅಶೋಕಕುಮಾರ ಕರಂಜಿ, ವೀರುಪಾಕ್ಷ ಗಾದಗಿ, ಸಂತೋಷ ಪಾಟೀಲ, ಆಧೀಶ ವಾಲಿ, ವಿಜಯಕುಮಾರ ಪಾಟೀಲ ಸೇರಿದಂತೆ 150ಕ್ಕೂ ಅಧಿಕ ಬಸವಾನುಯಾಯಿಗಳು ಈ ಕಾರು ರ್ಯಾಲಿಯಲ್ಲಿ ಪಾಲ್ಗೊಂಡರು.

# ಅಖಂಡ ಹರಿನಾಮ ಸಪ್ತಾಹ ಸಮಾರೋಪ



**ಕಮಲನಗರ:**ತಾಲೂಕಿನ ಹೊಳೆಸಮುದ್ರ ಗ್ರಾಮದ ರಾಮ ಮಂದಿರದ ಸಭಾಮಂಟಪದಲ್ಲಿ ನಡೆದ ಅಖಂಡ ಹರಿನಾಮ ಸಪ್ತಾಹವು ಏಳು ದಿನಗಳ ಕಾಲ ಯಶಸ್ವಿಯಾಗಿ ನೆರವೇರಿತು. ಶ್ರೀ ಕ್ಷೇತ್ರ ಹೊಳೆಸಮುದ್ರ ಗ್ರಾಮದಲ್ಲಿ ಹರಿನಾಮ ಸಪ್ತಾಹ ಮತ್ತು ಜ್ಞಾನೇಶ್ವರಿ ಪಾರಾಯಣ ಕಾಕಡ ಭಜನೆ ಜ್ಞಾನೇಶ್ವರಿ ಪಾರಾಯಣ ಗಾಥಾ ಭಜನೆ ಪ್ರವಚನ ಹರಿ ಕೀರ್ತನೆಗಳು ದೈನಂದಿನ ಕಾರ್ಯಕ್ರಮಗಳಿಗೆ

ಸಾಕ್ಷಿಯಾಗಿತ್ತು.ಸತತ ಏಳು ದಿನಗಳು ಹಗಲು ರಾತ್ರಿ ಎನ್ನದೆ ವೀಣೆಯನ್ನು ಭೂಮಿಯ ಮೇಲಿಡದೆ, ವೀಣೆಧಾರಿಯಾದವನು ಹರಿನಾಮ ಜಪಿಸುತ್ತಿರಬೇಕು.ಈ ಸಮಯಕೆ

ಗ್ರಾಮದ ಆಡಳಿತ ಮಂಡಳಿಯವರು ಸತತ ಪರಿಶ್ರಮ ಮತ್ತು ಗ್ರಾಮದ ಸರ್ವ ಭಕ್ತರ ತನು, ಮನ, ಧನ ದಿಂದ ಹಾಗೂ ಅವರ ಸಹಕಾರ ದಿಂದ ಇಂತಹ ಅದ್ಭುತ ಕಾರ್ಯಕ್ರಮ ಸಾಕಾರಗೊಂಡಿತು.

ಸಪ್ತಾಹದ ಅಂಗವಾಗಿ ಪ್ರತಿದಿನ ಭಗವಂತನ ನಾಮಸ್ಮರಣೆ, ಭಜನೆ ಹಾಗೂ ಕೀರ್ತನೆಗಳು ನಿರಂತರವಾಗಿ ಜರುಗಿದವು. ಭಕ್ತರು ಉತ್ಸಾಹದಿಂದ ಭಾಗವಹಿಸಿದ್ದರು.

ಈ ಮಧ್ಯದಲ್ಲಿ ಸಪ್ತಾಹದ ಉತ್ಸವ ಮಂಟಪದ ಮಧ್ಯ ಮೇಲೆ ಕಟ್ಟಿದ ಮೊಸರ ಗಡಿಗೆ ಕಡಗೋಲಿನಿಂದ ಅದನ್ನು ಒಡೆಯಲಾಗುತ್ತದೆ ಇದು ಶ್ರೀಕೃಷ್ಣನು ಗೋಕುಲದಲ್ಲಿದ್ದಾಗ ಹಾಡಿದ ಬಾಲ ಲೀಲೆಯ ಆಟದ ದ್ಯೋತಕವಾಗಿರುತ್ತದೆ, ಎಂತಲೇ ವಿಠಲ ಭಕ್ತರಾದ ಸಂತರ ಕೂಟವು ಹಾಡಿ ಹೊಗಳಿದ್ದರು. ಗಡಿಗೆಯಲ್ಲಿರುವ ಅಳ್ಳು ಮತ್ತು ಮೊಸರ ಸೇರಿಸಿರುವ ಪ್ರಸಾದವನ್ನು ಇದಕ್ಕೆ ಕಾಲ ಎಂದು ಕರೆಯುತ್ತಾರೆ ಎಂದು ಹ.ಭ.ಪ.ಏಕನಾಥ ಮಹಾರಾಜ ಹಂಡೆ ನುಡಿದರು.

ಊರಿನ ಯುವಕರಾದ

ಓಂಕಾರ್ ಮಧುಕರ್ ತೋಡ ಚಿರೆ, ಸಂತೋಷ್ ನ್ಯಾನಭಾ ಸಿಂಧೆ, ಪ್ರಶಾಂತ್ ಪಾಂಡುರಂಗ ಕದಮ್, ಶೇಖರ ಸುರೇಶ್ ಹಂಗರ್ಗೆ ಇವರೆಲ್ಲರು ಸೇರಿಕೊಂಡು ಮಹಾಪ್ರಸಾದ ವ್ಯವಸ್ಥೆ ನಡೆಸಿಕೊಟ್ಟಿದ್ದರು.

ಈ ಸಂದರ್ಭದಲ್ಲಿ ಜ್ಞಾನೇಶ್ವರಿ ಪಾರಾಯಣ ಮತ್ತು ಭಾಗವತ ಕಥೆಗಳ ಮೂಲಕ ಭಕ್ತರಿಗೆ ಆಧ್ಯಾತ್ಮಿಕ ಸಂದೇಶಗಳನ್ನು ನೀಡಿದರು. ಈ ಕಾರ್ಯಕ್ರಮಗಳು ಭಕ್ತರಲ್ಲಿಧಾರ್ಮಿಕ ಚಿಂತನೆ ಮತ್ತು ಆತ್ಮೀಯತೆಯನ್ನು ಹೆಚ್ಚಿಸಿತು. ಇಂಥಹ ಉತ್ಸವ ಕಾರ್ಯಕ್ರಮವು ಸಮಾರೋಪ ಸಮಾರಂಭವು ಮುಕ್ತಾಯಗೊಂಡಿತು.

ಅಖಂಡ ಹರಿನಾಮ ಸಪ್ತಾಹವು ಗ್ರಾಮಸ್ಥರಲ್ಲಿ ಭಕ್ತಿಭಾವವನ್ನು ವೃದ್ಧಿಸುವುದರ ಜೊತೆಗೆ, ಸಮುದಾಯದಲ್ಲಿ ಆಧ್ಯಾತ್ಮಿಕ ಜಾಗೃತಿಗೆ ದಾರಿ ಮಾಡಿಕೊಟ್ಟಿತು ಎಂದು ಹೇಳಿದರೆ ತಪ್ಪಾಗಲಿಕ್ಕಿಲ್ಲ!

ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಅನೇಕ ಗ್ರಾಮಸ್ಥರು ಹಾಗೂ ವಿವಿಧ ಗ್ರಾಮಗಳಿಂದ ಭಕ್ತರು ಪಾಲ್ಗೊಂಡಿದ್ದರು.

ಈ ನಿಮಿತ್ತ ಅಖಂಡ ಹರಿನಾಮ ಸಪ್ತಾಹದ ದೇವಸ್ಥಾನ ಸಮಿತಿ ಅಧ್ಯಕ್ಷರು ಸೇರಿ ಇತರರು ಉಪಸ್ಥಿತರಿದ್ದರು.

# ಕಬ್ಬು ಬೆಳಗಾರರ ಹಣ ಪಾವತಿಸದಿದ್ದರೇ ಉಗ್ರ ಹೋರಾಟ



**ಭಾಲ್ಕಿ:**ಜಿಲ್ಲೆಯ ಕಬ್ಬು ಬೆಳೆಗಾರರು ಗೌರಿ ಸಕ್ಕರೆ ಕಾರಖಾನೆಗೆ ಕಬ್ಬು ಸಾಗಿಸಿ ನಾಲ್ಕು ತಿಂಗಳು ಪೂರ್ಣಗೊಂಡಿವೆ. ಆದರೆ ಕಬ್ಬು ಪೂರೈಸಿದ ರೈತರ ಖಾತೆಗೆ ಇದು ವರೆಗೂ ಬಾಕಿ ಹಣ ಪಾವತಿಸಿಲ್ಲ, ಶೀಘ್ರವೇ ಹಣ ನೀಡದಿದ್ದರೇ ರೈತರೊಂದಿಗೆ ಸೇರಿ ಕಾರಖಾನೆಗೆ ಬೀಗ ಜಡಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಎಚ್ಚರಿಕೆ ನೀಡಿದ್ದಾರೆ.

ತಾಲೂಕಿನ ಬಾಜೋಳಗಾ ಕ್ರಾಸ್ ಸಮೀಪದ ಗೌರಿ ಸಕ್ಕರೆ ಕಾರಖಾನೆಗೆ ರೈತರೊಂದಿಗೆ ಶನಿವಾರ ಭೇಟಿ ನೀಡಿ ಸಾಂಕೇತಿಕ ಧರಣಿ ನಡೆಸಿ ಅವರು ಮಾತನಾಡಿದರು. ಸಕ್ಕರೆ ಕಾರಖಾನೆ ಆಡಳಿತ ಮಂಡಳಿ ಅವರು ಕಬ್ಬು ಸಾಗಿಸಿದ ರೈತರಿಗೆ ಇದು ವರೆಗೂ ಬಾಕಿ ಹಣ ನೀಡಿಲ್ಲ. ಇದರಿಂದ ರೈತರು ಸಂಕಷ್ಟದಲ್ಲಿದ್ದಾರೆ. ಕೂಡಲೇ ನಿಗದಿ ಪಡಿಸಿದ ಬಾಕಿ ಹಣ ನೀಡಬೇಕು. ಸಧ್ಯದಲ್ಲೇ ಕಬ್ಬು ಬೆಳಗಾರರ ಖಾತೆಗೆ ಬಾಕಿ ಉಳಿದಿರುವ ಹಣ ಜಮಾಡುವುದಾಗಿ ಭರವಸೆ ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ಒಂದು ದಿನದ ಸಾಂಕೇತಿಕ ಧರಣಿ ಕೈಬಿಡುತ್ತಿದ್ದೇವೆ. ವಿಳಂಬ ಮಾಡಿದರೇ ಮುಂದಿನ ವಾರ ಉಗ್ರ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ರೈತ ಸಂಘದ ಪ್ರಮುಖರಾದ ಮಲ್ಲಿಕಾರ್ಜುನ ಬಿರಾದಾರ್, ನಾಗಶೆಟ್ಟೆಪ್ಪ ಲಂಜವಾಡೆ, ರುದ್ರಯ್ಯ ಸ್ವಾಮಿ, ಕಾಶಿನಾಥ ಬಿರಾದಾರ್, ವಿಶ್ವನಾಥ ಧನ್ನೂರೆ, ಸುರೇಶ ಅಲ್ಲೂರೆ, ಶರಣಯ್ಯ ಸ್ವಾಮಿ, ಸುಭಾಷ, ಬಸವರಾಜ ಪಾಟೀಲ್, ರಾಜಕುಮಾರ ಬಾಲಕುಂದೆ, ಹಣಮಂತಪ್ಪ ಫಾಲೆ, ದಿಲೀಪ ಬಿರಾದಾರ್, ಸಿದ್ರಾಮ ಶೆಟಕಾರ್, ವೀರಾರೆಡ್ಡಿ ಪಾಟೀಲ್, ಶಿವಶಂಕರ ಬಿರಾದಾರ್, ಸನ್ಮುಖಪ್ಪ ಆಣದೂರ, ಕೆ.ಎಸ್.ಖಾನಸಾಬ್, ರವೀಂದ್ರ ಬಿರಾದಾರ್, ಸೋಮನಾಥ ಕೋಣಗುತ್ತೆ, ಧೂಳಪ್ಪ ಸೋರಳ್ಳೆ, ವಿಠಲ ರೆಡ್ಡಿ ಆಣದೂರ, ರಾಜಕುಮಾರ, ರೇವಣಸಿದ್ದ, ವೀರಶೆಟ್ಟಿ ಕಲಾ, ದತ್ತುರಾವ ಬಿರಾದಾರ್, ನಾಗಶೆಟ್ಟಿ ಖಂದಾರೆ, ಬಾಬುರಾವ ಸೇರಿದಂತೆ ಹಲವರು ಇದ್ದರು.

# ಬಾಬು ಬಿರಾದಾರ ಕಾಲೇಜಗೆ ಉತ್ತಮ ಫಲಿತಾಂಶ



**ಬೀದರ್** : ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ –01ರಲ್ಲಿ ಉತ್ತಮ ಫಲಿತಾಂಶ ಪಡೆಯುವ ಮೂಲಕ ಇಲ್ಲಿನ ಬೀದರ ನಗರದಲ್ಲಿರುವ ಬಾಬು ಬಿರಾದಾರ ಪದವಿ ಪೂರ್ವ ವಿಜ್ಞಾನ ಕಾಲೇಜು, ಗುರುದ್ವಾರ ಕಾಮಾನ್ ಒಳಗಡೆ, ರೋಹಿತ ರೆಸ್ಟೋರೆಂಟ್ ಹೋಟಲ್ ಹತ್ತಿರ, ಬೀದರ, ಕಾಲೇಜಿನ ವಿದ್ಯಾರ್ಥಿಗಳು ಸಾಧನೆಗೈದಿದ್ದಾರೆ.

ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಈ ಪೈಕಿ 01 ಅಗ್ರ ಶ್ರೇಣಿ, 13 ಪ್ರಥಮ ದರ್ಜೆ ಮತ್ತು ಉಳಿದ ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಕಾಲೇಜಿನ ಒಟ್ಟಾರೆ ಫಲಿತಾಂಶ ಶೇ 8.14% ಆಗಿದೆ. 90% ಎಂದು ಬಾಬು ಬಿರಾದಾರ ಪಿಯು ಕಾಲೇಜಿನ ಅಧ್ಯಕ್ಷರಾದ ಶ್ರೀಮತಿ. ಆರುಣ ಬಿ. ಬಿರಾದಾರ ಅವರು ತಿಳಿಸಿದ್ದಾರೆ.

ಕು. ಲಾವಣ್ಯ ಶೇ. 87 ರಷ್ಟು ಅಂಕ ಗಳಿಸಿ ಅಗ್ರ ಶ್ರೇಣಿಯಲ್ಲಿ ಪಾಸಾಗಿ ಕಾಲೇಜಿಗೆ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಉಳಿದ ವಿದ್ಯಾರ್ಥಿಗಳು 84, 83% ಮತ್ತು 80% ಹೀಗೆ ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಪಾಸಾಗಿ ಅಂಕ ಪಡೆದು ಸಾಧನೆ ಮಾಡಿದ್ದಾರೆ. ಎಂದು ಮಾಹಿತಿ ನೀಡಿ ಆಡಳಿತ ಮಂಡಳಿಯವರು ಹರ್ಷ ವ್ಯಕ್ತಪಡಿಸಿದ್ದಾರೆ.

ಕಾಲೇಜಿನಲ್ಲಿ ಉತ್ತಮ ಶೈಕ್ಷಣಿಕ ವಾತಾವರಣ, ಗುಣಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ. ಹಾಗೂ ಸಿಇಟಿ. ನೀಟ್, ಜೆಇಇ ಇತರೆ ಸ್ಪರ್ಧಾತ್ಮಕ ಸ್ಪರ್ಧೆಯಲ್ಲಿ ಭಾಗವಹಿಸಲು ತರಬೇತಿ ನೀಡಲಾಗುತ್ತಿದೆಂದು ಕಾಲೇಜಿನ ಆಡಳಿತ ಮಂಡಳಿಯವರು ತಿಳಿಸಿದ್ದಾರೆ. ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲರು, ಉಪನ್ಯಾಸಕರು, ಪಾಲಕರು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.



# ಸೆಕ್ಷನ್ 4(1)ಎ, 4(1)ಬಿ ಮಾಹಿತಿ ಸಾರ್ವಜನಿಕವಾಗಿ ಪ್ರಕಟಿಸುವಂತೆ ಸೂಚನೆ:ವೆಂಕಟ್ ಸಿಂಗ್

ಕಲಬುರಗಿ: ಮಾಹಿತಿ ಹಕ್ಕು ಕಾಯ್ದೆಯ ಸೆಕ್ಷನ್ 4(1)ಎ, 4(1)ಬಿ ರಂತೆ ಇಲಾಖೆಯ ಮಾಹಿತಿಯನ್ನು ಸಾರ್ವಜನಿಕವಾಗಿ ಪ್ರಕಟಿಸುವಂತೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ.ವೆಂಕಟ್ ಸಿಂಗ್ ಹೇಳಿದರು.

ಶನಿವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇಂದಿಲ್ಲಿ ಜಿಲ್ಲೆಯ ಎಲ್ಲಾ ಜಿಲ್ಲಾ, ತಾಲೂಕು, ಗ್ರಾಮೀಣ ಹಂತದ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗರ ನಡೆಸಲಾಗಿದ್ದು, ಮಾಹಿತಿ ಹಕ್ಕು ಕಾಯ್ದೆಯ ಮೂಲ ಆಶಯವೇ ಉತ್ತರದಾಯಿತ್ವ ಮತ್ತು ಸಾರ್ವಜನಿಕರಿಗೆ ಮಾಹಿತಿ ಒದಗಿಸುವುದಾಗಿದೆ. ಹೀಗಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಮ್ಮ ಕಚೇರಿ ಮಾಹಿತಿಯನ್ನು ಸ್ವಯಂ ಪ್ರೇರಿತರಾಗಿ ಕಾಯ್ದೆಯ ಸೆಕ್ಷನ್ 4(1)ಎ, 4(1)ಬಿ ರಂತೆ ಇಲಾಖೆಯ ಮಾಹಿತಿಯನ್ನು ಸಾರ್ವಜನಿಕವಾಗಿ ಪ್ರಕಟಿಸಿದಲ್ಲಿ ಕಚೇರಿಗೆ ಬರುವ ಅರ್ಜಿ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ತಿಳಿಸಲಾಗಿದೆ ಎಂದರು.ಕಲಬುರಗಿ ವಿಭಾಗದ ಪ್ರತಿ ಜಿಲ್ಲೆಯಲ್ಲಿ ಈ ರೀತಿಯ ಕಾರ್ಯಾಗಾರ ಆಯೋಜಿಸಿ ಅಧಿಕಾರಿಗಳಲ್ಲಿ ಕಾಯ್ದೆ ಮಹತ್ವ ಮತ್ತು ಉದ್ದೇಶ ಹಾಗೂ ತ್ವರಿತ ವಿಲೇವಾರಿ ಕುರಿತು ಅರಿವು ಮೂಡಿಸಲಾಗುತ್ತಿದೆ. ಇಂದಿನ ಕಾರ್ಯಾಗರದಲ್ಲಿ ನೂರಾರು ಸಂಖ್ಯೆಯಲ್ಲಿ ಅಧಿಕಾರಿಗಳು ಭಾಗವಹಿಸಿದ್ದು, ಅವರಲ್ಲಿ ಕಾಯ್ದೆ ಕುರಿತು, ಅರ್ಜಿ ವಿಲೇವಾರಿಯಲ್ಲಿರುವ ಹಲವು ಗೊಂದಲಗಳಿಗೆ ಇಂದಿಲ್ಲಿ ಸಂವಾದ ನಡೆಸಿ ಪರಿಹಾರ ನೀಡಲಾಗಿದೆ ಎಂದರಲ್ಲದೆ ಗೈರಾದ ಅಧಿಕಾರಿಗಳಿಗೆ ನೋಟಿಸ್ ನೀಡಲು ಸೂಚಿಸಿದೆ ಎಂದರು.

ಅಡಳಿತದಲ್ಲಿ ಪಾರದರ್ಶಕತೆ, ಜನರಿಗೆ ಉತ್ತರದಾಯಿತ್ವ ಇರಬೇಕೆಂದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಹಿತಿ ಹಕ್ಕು ಕಾಯ್ದೆ ತರಲಾಗಿದೆ.

# ಯಲ್ಲಮ್ಮ ದೇವಿ ಪಬ್ಲಿಕ್ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಅಗ್ನಿ ಸುರಕ್ಷತಾ ಪ್ರದರ್ಶನ



ಕರಜಗಿ :ಅಫಜಲಪುರ ತಾಲೂಕಿನ ಮಣ್ಣೂರ ಗ್ರಾಮದ ಶ್ರೀ ಯಲ್ಲಮ್ಮ ದೇವಿ ಪಬ್ಲಿಕ್ ಶಾಲೆಯಲ್ಲಿ ಅಫಜಲಪುರ ಅಗ್ನಿಶಾಮಕ ಠಾಣೆ ವತಿಯಿಂದ ರಾಷ್ಟ್ರೀಯ ಅಗ್ನಿಶಾಮಕ ಸೇವಾ ಸಪ್ತಾಹದ ಅಂಗವಾಗಿ ವಿದ್ಯಾರ್ಥಿಗಳಿಗೆ ಅಗ್ನಿ ಸುರಕ್ಷತಾ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಅಫಜಲಪೂರ ಅಗ್ನಿಶಾಮಕ ಠಾಣೆ ಠಾಣಾಧಿಕಾರಿ ವಿಶ್ವನಾಥ ಕಾಮರೆಡ್ಡಿ ಹಾಗೂ ಅವರ ತಂಡ ವಿದ್ಯಾರ್ಥಿಗಳಿಗೆ ಅಗ್ನಿ ಅವಘಡಗಳನ್ನು ಹೇಗೆ ತಡೆಗಟ್ಟಬೇಕು, ಅಗ್ನಿ ಸಂಭವಿಸಿದಾಗ ಕೈಗೊಳ್ಳಬೇಕಾದ ಕ್ರಮಗಳು ಮತ್ತು ಅಗ್ನಿಶಾಮಕ ಉಪಕರಣಗಳ ಬಳಕೆ ಕುರಿತು ಪ್ರಾಯೋಗಿಕ ಪ್ರದರ್ಶನ ನೀಡಿದರು.

ವಿದ್ಯಾರ್ಥಿಗಳು ಅಗ್ನಿ ಸುರಕ್ಷತೆಯ ಮಹತ್ವವನ್ನು ಅರಿತುಕೊಂಡು, ತುರ್ತು ಸಂದರ್ಭಗಳಲ್ಲಿ ಜವಾಬ್ದಾರಿಯುತವಾಗಿ ನಡೆದುಕೊಳ್ಳುವ ಬಗ್ಗೆ ಮಾರ್ಗದರ್ಶನ ಪಡೆದರು. ಈ ಪ್ರದರ್ಶನವು ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತ ಹಾಗೂ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.

ಈ ಸಂದರ್ಭದಲ್ಲಿ ಸಂಸ್ಥೆ ಅಧ್ಯಕ್ಷ ಮಹಾದೇವಪ್ಪ ಕರೂಟಿ, ಸದಸ್ಯರಾದ ಶಿವಶರಣಪ್ಪ ರೋಡಗಿ, ಮಲ್ಲನಗೌಡ ಬಗಲಿ,ಆಡಳಿತಾಧಿಕಾರಿ ಗುರುರಾಜ ಕೆಂದೂರ, ಪ್ರಾಚಾರ್ಯೆ ಭಾಗ್ಯಜ್ಯೋತಿ ಎಚ್. ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.



# ಹೆದ್ದಾರಿ ದುರಂತಗಳ ನಡುವೆ ಜನರ ಆಕ್ರೋಶ: ಅಗಲೀಕರಣ ವಿಳಂಬಕ್ಕೆ ಸಚಿವರ ವಿರುದ್ಧ ಕಿಡಿ, ಮಸಿ ಎಚ್ಚರಿಕೆ

ಯಾದಗಿರಿ:ಬೀದರ-ಶ್ರೀರಂಗಪಟ್ಟಣ ಹೆದ್ದಾರಿ ಅಗಲೀಕರಣದಲ್ಲಿ ಮುಂದುವರಿದಿರುವ ವಿಳಂಬದ ವಿರುದ್ಧ ಕನ್ನಡ ಜನ್ಮಭೂಮಿ ಯುವ ಸೇನೆ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಜೇವರ್ಗಿಯಿಂದ ಲಿಂಗಸುಗೂರವರೆಗೆ ರಸ್ತೆ ಅಗಲೀಕರಣ ಕಾಮಗಾರಿ ತಕ್ಷಣ ಆರಂಭಿಸದಿದ್ದರೆ ಸಂಬಂಧಪಟ್ಟ ಸಚಿವರ ವಿರುದ್ಧ ಹಂತ ಹಂತವಾಗಿ ಉಗ್ರ ಹೋರಾಟ ನಡೆಸುವುದಾಗಿ ಸಂಘಟನೆ ಎಚ್ಚರಿಕೆ ನೀಡಿದೆ.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷ ಚಾಂದ್ ಮುಲ್ಲಾ, "ಹೆದ್ದಾರಿ ಎಂಬ ಹೆಸ-ರಿನಲ್ಲೇ ಉಳಿದಿರುವ ಈ ರಸ್ತೆ ಕಳೆದ ಐವತ್ತು ವರ್ಷಗಳಿಂದಲೂ ಕಿರಿದಾದ ಜಿಲ್ಲಾ ರಸ್ತೆಯಂತೆಯೇ ಇದೆ. ಇದಕ್ಕೆ ಸ್ಥಳೀಯ ಜನಪ್ರತಿನಿಧಿಗಳ ನಿರ್ಲಕ್ಷ್ಯವೇ ಪ್ರಮುಖ ಕಾರಣ," ಎಂದು ಆರೋಪಿಸಿದರು.

ಈ ಮಾರ್ಗದಲ್ಲಿ ನಿರಂತರವಾಗಿ ಭೀಕರ ಅಪಘಾತಗಳು ಸಂಭವಿಸುತ್ತಿದ್ದರೂ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಎಚ್ಚೆತ್ತುಕೊಳ್ಳದಿರುವುದು ದುಃಖಕರ ಸಂಗತಿ ಎಂದು ಅವರು ಹೇಳಿದರು. ಇತ್ತೀಚೆಗೆ ಶೋರಾಪುರ (ಸುರಪುರ) ತಾಲ್ಲೂಕಿನ ಶಾಂತಪುರ ಕ್ರಾಸ್ ಬಳಿ ಏಪ್ರಿಲ್ 17ರಂದು ಸಂಭವಿಸಿದ ಭೀಕರ ಅಪಘಾತ ಸಂಭವಿಸಿದೆ ಇನ್ನು ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಒಂದೇ ಕುಟುಂಬದ ಒಂಬತ್ತು ಮಂದಿ ಸಜೀವ ದಹನವಾಗಿರುವ ದುರಂತವೂ ಅಧಿಕಾರಿಗಳಿಗೆ ಎಚ್ಚರಿಕೆಯಾಗಿ ಕಾಣಿಸಿಕೊಳ್ಳಲಿಲ್ಲವೇ?" ಎಂದು ಪ್ರಶ್ನಿಸಿದರು.

"ಇಷ್ಟೊಂದು ಜೀವಹಾನಿಯಾದರೂ ಕ್ರಮ ಕೈಗೊಳ್ಳದಿದ್ದರೆ ಇನ್ನೆಷ್ಟು ಜನರು ಪ್ರಾಣ ಕಳೆದುಕೊಳ್ಳಬೇಕು?" ಎಂದು ಕಿಡಿಕಾರಿದ ಅವರು, ತಕ್ಷಣವೇ ಅಗಲೀಕರಣ ಕಾಮಗಾರಿ ಆರಂಭಿಸಬೇಕು ಎಂದು ಆಗ್ರಹಿಸಿದರು.

ಅಗತ್ಯ ಕ್ರಮ ಕೈಗೊಳ್ಳದಿದ್ದಲ್ಲಿ ಸಂಘಟನೆ ಹಂತ ಹಂತವಾಗಿ ಹೋರಾಟವನ್ನು ತೀವ್ರಗೊಳಿಸಿ, ಸಚಿವರ ಮುಖಕ್ಕೆ ಮಸಿ ಬಳಿಯುವಂತಹ ಪ್ರತಿಭಟನೆಗಳನ್ನೂ ಹಮ್ಮಿಕೊಳ್ಳಲಿದೆ ಎಂದು ಎಚ್ಚರಿಸಿದರು. "ಜನರ ಸಹನೆಯ ಮಿತಿ ಮೀರುತ್ತಿದೆ. ಪರಿಸ್ಥಿತಿ ಉಗ್ರ ರೂಪ ತಾಳುವ ಮೊದಲು ಸರ್ಕಾರ ಎಚ್ಚೆತ್ತು ಕ್ರಮ ಕೈಗೊಳ್ಳಬೇಕು," ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಶಹಾಪೂರ ತಾಲ್ಲೂಕು ಅಧ್ಯಕ್ಷ ಶರಣಪ್ಪ ಬಂದಳ್ಳಿ, ಖಾಸಿಮ್ ಮುಲ್ಲಾ, ಮಹೆಬೂಬ ಮುಲ್ಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಹಿಳಾ ಮೀಸಲಾತಿ ವಿವಾದ: ಕಾಂಗ್ರೆಸ್ ವಿರುದ್ಧ ರಾಚನಗೌಡ ಮುದ್ನಾಳ್ ಆಕ್ರೋಶ



ಯಾದಗಿರಿ: ಮಹಿಳೆಯ-ರಿಗೆ ರಾಜಕೀಯವಾಗಿ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಮುಂದಿಟ್ಟಿರುವ 'ನಾರಿ ಶಕ್ತಿ ವಂದನಾ' ಯೋಜನೆಗೆ ಕಾಂಗ್ರೆಸ್ ಪಕ್ಷ ತೋ-ರಿದ ನಿಲುವು ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ ಎಂದು ಬಿಜೆಪಿ ಮುಖಂಡ ರಾಚನಗೌಡ ಮುದ್ನಾಳ್ ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಮಹಿಳೆಯರ ಸಬಲೀಕರಣದ ವಿಷಯದಲ್ಲಿ ಮಾತು ಮತ್ತು ಕೃತ್ಯಗಳಲ್ಲಿ ವ್ಯತ್ಯಾಸ ತೋರಿಸುತ್ತಿರುವ ಕಾಂಗ್ರೆಸ್, ತನ್ನ ನಿಜಸ್ವರೂಪವನ್ನು ಮತ್ತೆ ಹೊರ ಹಾಕಿಕೊಂಡಿದೆ ಎಂದು ಹೇಳಿದರು. ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸುವ ಪ್ರಯತ್ನವನ್ನು ಬೆಂಬಲಿಸುವ ಬದಲು ಅದಕ್ಕೆ ಅಡ್ಡಿಯಾಗಿರುವುದು ದುರಂತಕರ ಬೆಳವಣಿಗೆ ಎಂದು ಅಭಿಪ್ರಾಯಪಟ್ಟರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮಹಿಳಾ ಸಬಲೀಕರಣದತ್ತ ಹಲವು ಮಹತ್ವದ ಹೆಜ್ಜೆಗಳು ಇಡುತ್ತಿದ್ದರೆ, ವಿರೋಧ ಪಕ್ಷಗಳ ನಡೆ ಅದರ ವಿರುದ್ಧದ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಅವರು ಟೀಕಿಸಿದರು.

ಕಾಂಗ್ರೆಸ್ ಪಕ್ಷದ ರಾಜ-ಕೀಯ ಧೋರಣೆ ಸಾಮಾನ್ಯ ಜನರ, ವಿಶೇಷವಾಗಿ ಮಹಿಳೆಯರ ಹಿತಾಸಕ್ತಿಗೆ ಅನುವಾಗಿಲ್ಲ ಎಂದು ಆರೋಪಿಸಿದ ಅವರು, ದೇಶದ ಮಹಿಳಾ ಮತದಾರರು ಈ ಎಲ್ಲ ಬೆಳವಣಿಗೆಗಳನ್ನು ಗಮನಿಸುತ್ತಿದ್ದು, ಸೂಕ್ತ ಸಂದರ್ಭದಲ್ಲಿ ತಮ್ಮ ಪ್ರತಿಕ್ರಿಯೆಯನ್ನು ವ್ಯಕ್ತಪಡಿಸಲಿದ್ದಾರೆ ಎಂದು ಹೇಳಿದರು.

ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಮಹಿಳೆಯರ ಸುರಕ್ಷತೆ, ಗೌರವ ಮತ್ತು ರಾಜಕೀಯ ಪಾಲ್ಗೊಳ್ಳುವಿಕೆ ಹೆಚ್ಚಿಸುವುದು ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಸ್ಪಷ್ಟ ನಿಲುವು ಅಗತ್ಯ ಎಂದು ಅವರು ಒತ್ತಿ ಹೇಳಿದರು. ಮುಂಬರುವ ಚುನಾವಣೆಗಳಲ್ಲಿ ಮಹಿಳಾ ಮತದಾರರ ನಿರ್ಧಾರ ರಾಜಕೀಯ ಸಮೀಕರಣಗಳ ಮೇಲೆ ಮಹತ್ತರ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ರಾಚನಗೌಡ ಮುದ್ನಾಳ್ ವಿಶ್ಲೇಷಿಸಿದ್ದಾರೆ.

# ಮಹಿಳಾ ಮೀಸಲಾತಿ ಮಸೂದೆ: ಪ್ರತಿಪಕ್ಷಗಳ ವಿರುದ್ಧ ಮಹೇಶರೆಡ್ಡಿ ಮುದ್ನಾಳ್ ಕಿಡಿ



ಯಾದಗಿರಿ: ಮಹಿಳೆಯ-ರಿಗೆ ಶೇ.33ರ ಮೀಸಲಾತಿ ನೀಡುವ ಸಂವಿಧಾನ ತಿದ್ದುಪಡಿ ಮಸೂದೆಗೆ ಸಂಬಂಧಿಸಿದ ಬೆಳವಣಿಗೆಗಳ ಕುರಿತು ಬಿಜೆಪಿ ರಾಜ್ಯ ಕಾರ್ಯಕಾರಿ ಸದಸ್ಯ ಮಹೇಶರೆಡ್ಡಿ ಮುದ್ನಾಳ್ ಅವರು ಪ್ರತಿಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಹಿಳಾ ಮೀಸಲಾತಿ ಮಸೂದೆಯ ಸೋಲನ್ನು ಪ್ರತಿಪಕ್ಷಗಳು ಸಂಭ್ರಮಿಸುವುದು ಖಂಡನೀಯ ಎಂದು ಹೇಳಿದ್ದಾರೆ. ಇದರ ಮೂಲಕ ದೇಶದ ಮಹಿಳೆಯರ ಬಗ್ಗೆ ಪ್ರತಿಪಕ್ಷಗಳಿಗೆ ಇರುವ ಕಾಳಜಿ ಹಾಗೂ ಗೌರವದ ನಿಜಸ್ವರೂಪ ಬಹಿರಂಗವಾಗಿದೆ ಎಂದು ಟೀಕಿಸಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು 2029ರ ಚುನಾವಣೆಯಿಂದ ಮಹಿಳೆಯರಿಗೆ ಶೇ.33ರ ಮೀಸಲಾತಿ ನೀಡುವ ಉದ್ದೇಶದಿಂದ ಮಸೂದೆ ಮಂಡಿಸಿತ್ತು. ಆದರೆ, ಪ್ರತಿಪಕ್ಷಗಳು ಇದನ್ನು ವಿಫಲಗೊಳಿಸಲು ಪ್ರಯತ್ನಿಸಿರುವುದು ಅವರ ನಿಲುವನ್ನು ಸ್ಪಷ್ಟಪಡಿಸಿದೆ ಎಂದು ಅವರು ಆರೋಪಿಸಿದರು.

ಲೋಕಸಭೆಯಲ್ಲಿ ಮಹಿಳಾ ಕೋಟಾ ಕುರಿತ ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕಾರದ ವೇಳೆ ಕಾಂಗ್ರೆಸ್ ಸೇರಿದಂತೆ ಅದರ ಮೈತ್ರಿ ಪಕ್ಷಗಳು ಅವಕಾಶ ನೀಡಿಲ್ಲ. ಈ ನಡೆ ಮಹಿಳೆಯರ ಹಿತಾಸಕ್ತಿ ಮತ್ತು ದೇಶದ ಅಭಿವೃದ್ಧಿಗೆ ವಿರುದ್ಧವಾಗಿದೆ ಎಂದು ಮುದ್ನಾಳ್ ಕಿಡಿಕಾರಿದರು.

ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವ ಪ್ರತಿಪಕ್ಷಗಳು, ನೈಜ ಸಂದರ್ಭಗಳಲ್ಲಿ ಬೆಂಬಲ ನೀಡದೆ ಹಿನ್ನಡೆಯನ್ನುಂಟು ಮಾಡುತ್ತಿರುವುದು ವಿಷಾದನೀಯವೆಂದು ಅವರು ಅಭಿಪ್ರಾಯಪಟ್ಟರು.



# ಗಣತಿ ಕಾರ್ಯಕ್ಕೆ ಚಾಲನೆ

ನವಲಗುಂದ: ತಾಲ್ಲೂಕಿನ ಜಾವೂರ ಗ್ರಾಮದಲ್ಲಿ 2026ರ ಮನೆಪಟ್ಟಿ ಗಣತಿ ಕಾರ್ಯಕ್ಕೆ ಶನಿವಾರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವೀಂದ್ರಗೌಡ ಪಾಟೀಲ ಅಧಿಕೃತವಾಗಿ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು ಗಣತಿ ಕಾರ್ಯವು ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅತ್ಯಂತ ಮುಖ್ಯವಾಗಿದ್ದು, ಸಾರ್ವಜನಿಕರು ಪೂರ್ಣ ಸಹಕಾರ ನೀಡಿ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ತಾಲ್ಲೂಕು ಅಧ್ಯಕ್ಷ ವಿ.ಡಿ. ರಂಗಣ್ಣವರ ಮಾತನಾಡಿ ಸಾರ್ವಜನಿಕರು ಸರಿಯಾದ ಮಾಹಿತಿಯನ್ನು ನೀಡುವ ಮೂಲಕ ಗಣತಿ ಕಾರ್ಯ ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಗಣತಿದಾರರಾದ ಎಸ್.ಎನ್. ಅಕ್ಕಿಮರಡಿ, ಜಿ.ಎ. ಬೆಳಹಾರ, ಸರಿತಾ ಕೊಪ್ಪದ, ಪಿಡಿಓ ವಿಜಯಲಕ್ಷ್ಮಿ ಕೊರವರ ಸತೀಶ ಕೋರಿ ಇತರರು ಇದ್ದರು.

# ನವಲಗುಂದ ಗವಿಮಠದಲ್ಲಿ ಶ್ರೀ ಸಿದ್ಧಲಿಂಗೇಶ್ವರ ಜಾತ್ರಾ ಮಹೋತ್ಸವ: ವೈಭವದ ಕಾರ್ಯಕ್ರಮಗಳು ಏಪ್ರಿಲ್ 23ರವರೆಗೆ



ನವಲಗುಂದ : ಪಟ್ಟಣದಲ್ಲಿರುವ ಗವಿಮಠದ ಜಗದ್ಗುರು ಶ್ರೀ ಸಿದ್ಧಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಸರ್ವಧರ್ಮ ಸಮನ್ವಯ ಪ್ರಶಸ್ತಿ ಪ್ರಧಾನ ಮತ್ತು ಸಾಮೂಹಿಕ ವಿವಾಹ ಮಹೋತ್ಸವ ಸೇರಿದಂತೆ ವಿಶೇಷ ಕಾರ್ಯಕ್ರಮಗಳು 23 ರ ವರೆಗೆ ಜರುಗಲಿವೆ.

ಅಂ. ಪೂಜ್ಯಶ್ರೀ ಸಿದ್ದೀರದೇವರ ಮಣ್ಯತಿಥಿ ಹಾಗೂ ವೀರಯೋಧರ ಸ್ಮರಣೆ, ಸಂಜೆ 6.00 ಘಂಟೆಗೆ ವಾನ ಪ್ರಾರಂಬೋತ್ಸವ. ಏ 20 ಸೋಮವಾರ ಶ್ರೀ ಬಸವ ಜಯಂತಿಯಂದು ಬಸವೇಶ್ವರರ ಭಾವಚಿತ್ರದ ಭವ್ಯ ಮೆರವಣಿಗೆ ಮತ್ತು ಸಂಜೆ 7 ಘಂಟೆಗೆ ಶರಣ ಚಿಂತನ ಗೋಷ್ಠಿ

ಏ 21 ಮಂಗಳವಾರ ದಂದು ಆರೋಗ್ಯ ಚಿಂತನ ಗೋಷ್ಠಿ, ಮಕ್ಕಳ ಮತ್ತು ಮಹಿಳಾ ಚಿಂತನ ಗೋಷ್ಠಿ. ಏ 22 ಬುದುವಾರದಂದು ಜಾನುವಾರು ಪ್ರದರ್ಶನ ಹಾಗೂ ನವಲಗುಂದ ಅರ್ಬನ್ ಬ್ಯಾಂಕ್ ನವಲಗುಂದ ಇವರಿಂದ ಜಾನುವಾರುಗಳಿಗೆ ಬಹುಮಾನ ನೀಡುವುದು

ಏ 23 ಗುರುವಾರ ಬೆಳಿಗ್ಗೆ 6 ಘಂಟೆಗೆ ಶ್ರೀ ಸಿದ್ಧಲಿಂಗೇಶ್ವರರ ಕರ್ತೃ ಗದ್ದುಗೆಗೆ ವಚನಾಭಿಷೇಕ, ಬೆಳಿಗ್ಗೆ 8 ಕ್ಕೆ ಅಂಗದೀಕ್ಷೆ, ಅಯ್ಯಾಚಾರ 10 ಗಂಟೆಗೆ ಡಾ. ರಾಮು ಮೂಲಗಿ ಜಾನಪದ ವಿದ್ವಾಂಸರು ಹುಬ್ಬಳ್ಳಿ ಇವರಿಗೆ ಸರ್ವಧರ್ಮ ಸಮನ್ವಯ ಪ್ರಶಸ್ತಿ ಪ್ರಧಾನ ಹಾಗೂ ಸಾಮೂಹಿಕ ವಿವಾಹ ಮಹೋತ್ಸವ, ಬೆ.11-30 ಕ್ಕೆ ಮಹಾಪ್ರಸಾದ ಸಂಜೆ 05 ಘಂಟೆಗೆ ವಿವಿಧ ವಾದ್ಯ ವೈಭವಗಳೊಂದಿಗೆ ಸುಮಂಗಲೆಯರಿಂದ ಆರತಿ, ಕಳಸ, ಕನ್ನಡಿಯೊಂದಿಗೆ ಶ್ರೀ ಸಿದ್ಧಲಿಂಗೇಶ್ವರ ಮಹಾರಥೋತ್ಸವ ಜರುಗಲಿದೆ. ಧಾರವಾಡ ಮುರುಘಾಮಠ ಮಲ್ಲಿಕಾರ್ಜುನ ಸ್ವಾಮೀಜಿ, ಹುಬ್ಬಳ್ಳಿ ರುದ್ರಾಕ್ಷಿಮಠ ಬಸವಲಿಂಗ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ

ಧರ್ಮ ಜೊತಿ ಗ್ರಂಥ ಬಿಡುಗಡೆ : ಗುಡ್ಡದಆನವರಿ ವಿರಕ್ತಮಠದ ಶಿವಯೋಗೇಶ್ವರ ಸ್ವಾಮೀಜಿ, ಅಗಡಿ-ಗುತ್ತಲ ಪ್ರಭುಸ್ವಾಮಿಮಠದ ಗುರುಸಿದ್ಧ ಸ್ವಾಮೀಜಿ, ರಾಯನಾಳ ವಿರಕ್ತಮಠದ ರೇವಣ ಸಿದ್ದೇಶ್ವರ ಸ್ವಾಮೀಜಿ, ತುಪ್ಪದಕುರಹಟ್ಟಿ ಹಿರೇಮಠದ ವಾಗೀಶ ಪಂಡಿತರಾಧ್ಯಸ್ವಾಮೀಜಿ, ಯಲಬುರ್ಗಾ ಶ್ರೀಧರ ಮುರಡಿ ಹಿರೇಮಠದ ಬಸವಲಿಂಗ ಸ್ವಾಮೀಜಿ, ಬದಾಮಿ ನವಗ್ರಹ ಹಿರೇಮಠದ ಶಿವಪೂಜ ಸ್ವಾಮೀಜಿ, ಅಕ್ಕಿಆಲೂರು ಚನ್ನವೀರೇಶ್ವರ ವಿರಕ್ತಮಠದ ಶಿವಬಸವ ಸ್ವಾಮೀಜಿ, ಚಿಗೇರಿ-ವೆಂಕಟಾಪೂರ ಹಿರೇಮಠದ ಗುರುಸಿದ್ದೇಶ್ವರ ಸ್ವಾಮೀಜಿ, ಸಾಲೋಟಗಿ ಶ್ರೀ ಸಿದ್ದೇಶ್ವರ ಗುರುದೇವ ಆಶ್ರಮದ ಸಂಗಮೇಶ್ವರಸ್ವಾಮೀಜಿ, ನವಲಗುಂದ ಪಂಚಗೃಹ ಹಿರೇಮಠದ ವೀರಬಸವ ದೇವರು, ಹೊಳೆಆಲೂರ ಯಚ್ಚರಸ್ವಾಮಿ ಮಠದ ಅಭಿನವ ಯಚ್ಚರಸ್ವಾಮೀಜಿ ಯವರು ಧರ್ಮ ಜೊತಿ ಗ್ರಂಥ ಬಿಡುಗಡೆ ಮಾಡಲಿದ್ದಾರೆ.

ಕರ್ಲವಾಡ ಹಿರೇಮಠದ ಸಿದ್ಧವೀರ ಸ್ವಾಮೀಜಿ ಹಾಗೂ ಶಾಸಕ ಎನ್ ಎಚ್ ಕೋನರಡ್ಡಿ, ಮಾಜಿ ಶಾಸಕರಾದ ಶಂಕರ ಪಾಟೀಲಮುನೇನಕೊಪ್ಪ, ಕೆ ಎನ್ ಗಡ್ಡಿ ಸೇರಿದಂತೆ ವಿವಿಧ ಗಣ್ಯರು ಹಾಗೂ ಅಧಿಕಾರಿಗಳು ವಿಶೇಷ ಸನ್ಮಾನಿತರಾಗಿ ಭಾಗವಹಿಸಲಿದ್ದಾರೆ.

ಅಲ್ಲದೇ ಈ ಜಾತ್ರಾ ಮಹೋತ್ಸವದಲ್ಲಿ ಇನ್ನೂ ಅನೇಕ ಮಠಾಧೀಶರು, ಜನಪ್ರತಿನಿಧಿಗಳು, ಸಾಹಿತಿಗಳು, ಸಂಗೀತಗಾರರು ಹಾಗೂ ಕನ್ನಡ ಮತ್ತು ಸಾಂಸ್ಕೃತಿ-ಕ ಇಲಾಖೆಯ ವತಿಯಿಂದ ಕಲಾತಂಡಗಳು ಭಾಗವಹಿಸುವವು.

# ಡಾ.ಅಂಬೇಡ್ಕರ್ ಜಯಂತಿ ನಿಮಿತ್ತ ರಸಮಂಜರಿ ಕಾರ್ಯಕ್ರಮ



ಬಾದಾಮಿ:ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇಯ ಜಯಂತೋತ್ಸವದ ನಿಮಿತ್ಯ ಗುರುವಾರ ರಾತ್ರಿ ಮ್ಯೂಸಿಕ್ ಮೈಲಾರಿ ತಂಡದ ರಸಮಂಜರಿಯ ಕಾರ್ಯಕ್ರಮ ಜರುಗಿತು. ಮಾಜಿ ಶಾಸಕ ಎಂ.ಕೆ.ಪಟ್ಟಣಶೆಟ್ಟಿ, ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು

ಜಿಲ್ಲಾ ಬಿಜೆಪಿ ಪಕ್ಷದ ಅಧ್ಯಕ್ಷ ಶಾಂತಗೌಡ ಪಾಟೀಲ, ಜೆಡಿಎಸ್ ಜಿಲ್ಲಾಧ್ಯಕ್ಷ ಹನುಮಂತ ಮಾವಿನಮರ ಕಾರ್ಯಕ್ರಮವನ್ನು ಉದ್ದೇಶಿಸಿದ ಮಾತನಾಡಿದರು. ಡಾಟಟ ಬಾಬಾ ಸಾಹೇಬ್ ಅಂಬೇಡ್ಕರ್ 135 ನೇ ಜಯಂತೋತ್ಸವ ಅಂಗವಾಗಿ ಪ್ರತಿಭಾ ಪುರಸ್ಕಾರ ಮತ್ತು ರಸಮಂಜರಿ ಕಾರ್ಯಕ್ರಮ ಜರುಗಿತು.ಭೀಮವಾದ ದಲಿತ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಯಮನಪ್ಪ ಗುಣದಾಳ, ರುದ್ರೇಶ ಪ ಹುಣಸಿಗಿಡದ, ಲಾವ ಹಿರೇಮನಿ, ಬಸವರಾಜ ಪಾತ್ರೋಟಿ, ಯಲ್ಲಪ್ಪ ಪಾತ್ರೋಟಿ ಹುಲಗಪ್ಪ ಭೋವಿ, ರಕ್ಷಣಾ ವೇದಿಕೆ ಜಿಲ್ಲಾ ಕಾರ್ಯದರ್ಶಿ ಸ್ನೇಕ್ ಮಾಹಂತೇಶ್, ಶಹಜಿ ಪವಾರ ಶ್ರೀರಾಮ ಸೇನೆ ರಾಜ್ಯ ಕಾರ್ಯದರ್ಶಿ ಹೇಮಂತ ದೊಡಮನಿ, ಬಂಜಾರ ಸಮಾಜದ ಮುಖಂಡರು ಸೋಮಪ್ಪ ದೊಡಮನಿ, ಬಸವರಾಜ ಕೆರೂರ, ಕನಕಪ್ಪ ಮಾದರ ಸೇರಿದಂತೆ ವಿವಿಧ ರೀತಿಯ ದಲಿತ ಪರ ಸಂಘಟನೆಯ ನಾಯಕರು ಪದಾಧಿಕಾ-ರಿಗಳು ಪಾಲ್ಗೊಂಡಿದ್ದರು.



# ರಜತ ಮಹೋತ್ಸವಕ್ಕೆ ಚಾಲನೆ

ಮುನವಳ್ಳಿ: ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ಶ್ರೀ ಸಾಯಿ ಸೇವಾ ಸಮಿತಿ ಯವರಿಂದ ಶ್ರೀ ಸಾಯಿ ಮಂದಿರದ ರಜತ ಮಹೋತ್ಸವನ್ನು ಶ್ರೀ ಗುರು ಹ-ರಿದಾಸ ರಾಮಬಾವು ಭೋರಾಟೆ (ಕಾಕಾಮಾವೂಲಿ) ದ್ವಜಾ ರೋಹಣ ನೆರವರೆಸಿ ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಾನಿಧ್ಯವನ್ನು ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು, ಸತ್ಸಂಗ ಆಶ್ರಮದ ಶ್ರೀ ಮುಕ್ತಾನಂದ ಶ್ರೀಗಳು ವಹಿಸಿದ್ದರು.

ವಿಜಯ ಅಮತೆ, ಶ್ರೀಶೈಲ ಗೊಪಶೆಟ್ಟಿ, ಶ್ರೀಶೈಲ ಹಿರೇಮಠ, ಅಪ್ಪು ತಾಂದಳೆ, ಶಿವಯ್ಯ ಹಿರೆಮಠ, ಬಸವರಾಜ ಮಲಾಮರಡಿ, ಕಲ್ಲನ ಬಿಕ್ಕನಗೌಡ್ರ, ಸೋಮನಗೌಡ ದ್ಯಾಮನಗೌಡ್ರ, ಬಾಳು ಹೊಸಮನಿ, ಸೇವಾಸಮಿತಿಯ ಸರ್ವ ಸದಸ್ಯರು, ಸಾಯಿಯುವಕ ಮಂಡಳಿ ಹಾಗೂ ಸಂತ ಮಂಡಳಿಯವರು, ಸದ್ಭಕ್ತರು ಉಪಸ್ಥಿತರಿದ್ದರು.

# ಸ್ಪಂಧಿಸಿದ ಪುರಸಭೆ ಅಧಿಕಾರಿಗಳು

ಚಿತ್ತಾಪುರ: ಪಟ್ಟಣದ ಹೃದಯ ಭಾಗದ ಜನತಾ ಚೌಕ್ ಹತ್ತಿರದ ಮಾರುಕಟ್ಟೆಯಲ್ಲಿ ಮೂತ್ರ ವಿಸರ್ಜನೆಗೆ ಜನರ ಪರದಾಟ ಎನ್ನುವ ಶಿರ್ಷಿಕೆಯಡಿ ಎ.14ರಂದು ಸಂಜೆವಾಣಿ ದಿನ ಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗಿತ್ತು. ಕೂಡಲೇ ಪುರಸಭೆ ಮುಖ್ಯಾಧಿಕಾರಿ ಅವರ ನೇತೃತ್ವದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪಟ್ಟಣದ ಜನತಾ ಚೌಕ್ ಹತ್ತಿರ ಇರುವ ಏಕೈಕ ಸಾರ್ವಜನಿಕ ಶೌಚಾಲಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಗುತ್ತಿಗೆದಾರರನ್ನು ಕರೆಯಿಸಿ ಕೂಡಲೇ ಶೌಚಾಲಯ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ತಾಕೀತು ಮಾಡಿದರು. ಕೂಡಲೇ ಗುತ್ತಿಗೆದಾರರು ಶೌಚಾಲಯದ ಕಾಮಗಾರಿ ಪೂರ್ಣಗೊಳಿಸಿದ್ದರಿಂದ ಪಟ್ಟಣ ಹಾಗೂ ತಾಲೂಕಿನ ವಿವಿಧ ಗ್ರಾಮಗಳ ಜನರು ಶೌಚಾಲಯ ಉಪಯೋಗಿಸುವುದರ ಮೂಲಕ ನಿಟ್ಟುಸಿರು ಬಿಟ್ಟಿದ್ದಾರೆ.

ನಂತರ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಎಲ್ಲೇಲ್ಲಿ ಸಾರ್ವಜನಿಕ ಶೌಚಾಲಯದ ಕೊರತೆ ಇದೆ ಎನ್ನುವುದನ್ನು ಸಾರ್ವಜನಿಕರಿಂದ ಮಾಹಿತಿ ಪಡೆದುಕೊಂಡರು.

ಪಟ್ಟಣ ದಿನದಿಂದ ಬೆಳೆಯುತ್ತಿರುವ ಪಟ್ಟಣದ ಜನಸಂಖ್ಯೆಗೆ ಪೂರಕವಾಗಿ ಪುರಸಭೆ ಅಗತ್ಯ ಸೌಲಭ್ಯ ಒದಗಿಸಬೇಕಾಗಿದೆ. ಪಟ್ಟಣದ ಇನ್ನೂ ಹಲವು ಕಡೆಗಳಲ್ಲಿ ಸಾರ್ವಜನಿಕ ಶೌಚಾಲಯಗಳೇ ಇಲ್ಲ. ಪರಿಸರ ಕಾಪಾಡುವ ವಿಷಯಕ್ಕಿಂತ ನಿಸರ್ಗ ಕರೆಯನ್ನು ಪೂರೈಸುವುದೇ ಜನರಿಗೆ ಮುಖ್ಯವಾಗಿರುವುದರಿಂದ ಸಾರ್ವಜನಿಕರು ಮೂತ್ರ ವಿಸರ್ಜನೆಗೆ ಬಯಲನ್ನೆ ಆಶ್ರಯಿಸುವಂತಾಗಿದೆ. ಮಹಿಳೆಯರಿಗೆ ಪ್ರತ್ಯೇಕ ವ್ಯವಸ್ಥೆ ಇಲ್ಲದಿರುವುದ-ರಿಂದ ತೊಂದರೆ ಹೆಚ್ಚಿದೆ. ಹೀಗಾಗಿ ಕೂಡಲೇ ಪುರಸಭೆ ಅಧಿಕಾರಿಗಳು ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸುವುದರ ಮೂಲಕ ಅನುಕೂಲ ಮಾಡಿಕೊಡಬೇಕು ಎಂದು ಪಟ್ಟಣದ ನಿವಾಸಿಗಳು ಮನವಿ ಮಾಡಿದರು.



# ಎಂ. ಅರವಿಂದ ಅವರಿಗೆ ಪ್ರಶಸ್ತಿ ಪ್ರದಾನ

ಧಾರವಾಡ: ಪ್ರಸಕ್ತ ಸಾಲಿನ ಧಾರವಾಡ ಜಿಲ್ಲಾಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಚರಣೆಯ ಅಂಗವಾಗಿ ಜಿಲ್ಲಾಡಳಿತದಿಂದ ನೀಡಲಾಗುವ ಉತ್ಕೃಷ್ಟ ಸಮಾಜಸೇವಾ ಪ್ರಶಸ್ತಿಯನ್ನು ಸಮಾಜಸೇವಕ ಎಂ. ಅರವಿಂದ ಅವರಿಗೆ ಪ್ರದಾನಿಸಲಾಯಿತು. ಇಂದು ಬೆಳಿಗ್ಗೆ ಧಾರವಾಡ ಉಪವಿಭಾಗಾಧಿಕಾರಿಗಳ ಕಚೇ-ರಿಯಲ್ಲಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಅವರು ಪ್ರಶಸ್ತಿ ನೀಡಿ, ಗೌರವಿಸಿದರು. ಸಮಾಜದ ಹಿಂದುಳಿದ ವರ್ಗಗಳ ಅಭಿವೃದ್ಧಿ, ಸಾಮಾಜಿಕ ನ್ಯಾಯ ಹಾಗೂ ಜನಪರ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಎಂ. ಅರವಿಂದ ಅವರ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಐಟಿಐ ವಿದ್ಯಾರ್ಥಿಗಳಿಂದ ನಿರೀಕ್ಷೆಗೂ ಮೀರಿದಕೌಶಲ್ಯ ಪ್ರದರ್ಶನ, 100 ಪ್ರಾಜೆಗೆಳ ಪ್ರದರ್ಶನ



ಕಲಬುರಗಿ: ಗ್ರಾಮೀಣ ಭಾಗದ ವಿದ್ಯಾರ್ಥಿಗಳು ನಿರೀಕ್ಷೆಗೂ ಮೀರಿದ ಕೌಶಲ್ಯ ಪ್ರದರ್ಶಿಸಿದ್ದಾರೆ. ಭವಿಷ್ಯದಲ್ಲಿ ಐಟಿಐ ಪಾಸಾದ ಅಭ್ಯರ್ಥಿಗಳಿಗೆ ಜೆಸ್ಕಾಂನಲ್ಲಿ ಅಪ್ರೆಂಟಿಶಿಪ್ ತರಬೇತಿ ಹಾಗೂ ಲೈಮನ್ ಹುದ್ದೆಗಳಲ್ಲಿ ಆದ್ಯತೆ ನೀಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ ಹೇಳಿದರು.ನಗರದಲ್ಲಿ ಶನಿವಾರ ಸರ್ಕಾರಿ ಕೈಗಾರಿಕಾ ತರಬೇತಿ(ಪುರುಷ)ಸಂಸ್ಥೆಯಲ್ಲಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಪುರುಷ) ಕಲಬುರಗಿ ನೋಡಲ್ ಜಿಲ್ಲೆಯ ಸರಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಂಂ-ಯೋಜನೆಯಲ್ಲಿ ತಾಂತ್ರಿಕ ಕೌಶಲ್ಯ ಸ್ಪರ್ಧೆ/ಪ್ರದರ್ಶನ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಅಲ್ಲದೆ, ಸಂಸ್ಥೆಯ ಉನ್ನತೀಕರಣಕ್ಕೆ ಅಗತ್ಯವಿರುವ ಅನುದಾನಕ್ಕಾಗಿ ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸುವುದಾಗಿ ತಿಳಿಸಿದರು.

ಖ್ಯಾತ ಉದ್ದಿಮಿ ಅರುಣ-ಕುಮಾರ ಲೋಯಾ ಅವರು ಮಾತನಾಡಿ, ತರಬೇತಿದಾರರು ಕೇವಲ ನೌಕರಿಗಾಗಿ ಕಾಯದೆ, ತಾವೇ ಉದ್ಯಮ ಸ್ಥಾಪಿಸಿ ಇತರ-ರಿಗೆ ಉದ್ಯೋಗದಾತರಾಗಬೇಕು ಎಂದು ಹೇಳಿದರು. ದಾವಣಗೆರೆ ಐ.ಟಿ.ಓ.ಟಿ ಜಂಟಿ ನಿರ್ದೇಶಕ ರವೀಂದ್ರನಾಥ ಎಸ್. ಬಾಳ್ಳಿ ಅವರು ಮಾತನಾಡಿ ತರಬೇತಿ-ದಾರರ ಹಿತದೃಷ್ಟಿಯಿಂದ ಕೈಗಾರಿಕೆಗಳ ಜೊತೆ ಒಪ್ಪಂದ ಮಾಡಿಕೊಳ್ಳುವ ಅಗತ್ಯತೆಯನ್ನು ಪ್ರತಿಪಾದಿಸಿದರು.

ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಅನುದಾನಿತ ಐಟಿಐ ಸಂಸ್ಥೆಗಳ ಸುಮಾರು 1000 ತರಬೇತಿದಾರರು ಈ ಬೃಹತ್ ಪ್ರದರ್ಶನದಲ್ಲಿ ಪಾಲ್ಗೊಂಡು ತಮ್ಮ ತಾಂತ್ರಿಕ ನೈಪುಣ್ಯತೆಯನ್ನು ಪ್ರದರ್ಶಿಸಿದರು.

ಈ ಪ್ರದರ್ಶನದಲ್ಲಿ ಒಟ್ಟು 100 ತಾಂತ್ರಿಕ ಪ್ರಾಜೆಗಳನ್ನು ಪ್ರದರ್ಶಿಸಲಾಯಿತು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದಿಂದ 32, ಉತ್ಪಾದನಾ ವಿಭಾಗದಿಂದ 28, ಆಟೋಮೋಟಿನಿಂದ 19 ಸೇರಿದಂತೆ ಕನ್ಸಕ್ಷನ್, ಐಟಿ ಹಾಗೂ ಇತರ ವಿಭಾಗಗಳ ಮಾದರಿಗಳು ಜನರ ಗಮನ ಸೆಳೆದವು. ಲಭ್ಯವಿರುವ ಕಡಿಮೆ ಸಂಪನ್ಮೂಲಗಳನ್ನು ಬಳಸಿಕೊಂಡು ವಿದ್ಯಾರ್ಥಿಗಳು ತಯಾರಿಸಿದ ಈ ಪ್ರಾಜೆಗಳು ಅವರ ಪ್ರಾಯೋಗಿಕ ಜ್ಞಾನಕ್ಕೆ ಕನ್ನಡಿ ಹಿಡಿದಿದ್ದವು.

ಸಂಸ್ಥೆಯಪ್ರಾಚಾರ್ಯರಾದ ಮುರಲಿಧರ ರತ್ನಗಿರಿ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಉಪನಿರ್ದೇಶಕಿ ಡಾ. ರುಬಿನಾ ಪರ್ವೀನ್, ಶಕೀಲ ಅನ್ಸಾರಿ ಸೇರಿದಂತೆ ವಿವಿಧ ಐಟಿಐಗಳ ಪ್ರಾಚಾರ್ಯರು, ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಮಹಾನ್ ಮಾನವತಾವಾದಿ ಬಸವಣ್ಣನವರು : ಇಂಗಳೆ



■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಸಮಾಜದಲ್ಲಿನ ಮೌಢ್ಯಗಳನ್ನು ತಿದ್ದಿ, ಜಾತಿ, ಮತ ಪಂಥಗಳ ಭೇದವನ್ನು ತೊಲಗಿಸಿ ಸಮಾಜದಲ್ಲಿ ಸಮಾನತೆಗೆ ಶ್ರಮಿಸಿದ ವಿಶ್ವಗುರು ಬಸವಣ್ಣನವರು ಮಹಾನ್ ಮಾನವತಾವಾದಿಗಳಾಗಿದ್ದರು ಎಂದು ತಹಶಿಲ್ದಾರ ಸಂಜಯ ಇಂಗಳೆ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬಸವೇಶ್ವರ ಸೇವಾ ಸಮಿತಿ ಆಶ್ರಯದಲ್ಲಿ ಸೋಮವಾರ ಆಯೋಜಿಸಲಾದ ಬಸವಣ್ಣನವರ 893 ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಾವಿನಾಳದ ಚರಂತಿಮಠದ ವಿಜಯ ಮಹಾಂತೇಶ ಸ್ವಾಮೀಜಿ ಮಾತನಾಡಿ, ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಕಟ್ಟಿದ ವಿಶ್ವದ ಮೊದಲು ಸಂಸತ್ತು ಎಂದು ಹೆಸರಾದ ಅನುಭವ ಮಂಟಪ ಕಾಯಕಯೋಗವನ್ನು ಪ್ರತಿಪಾದಿಸಿ, ಶರಣ ಶರಣೆಯರು ನೀಡಿದ ಚಿಂತನೆಗಳು, ವಚನಗಳು ಮನುಕುಲಕ್ಕೆ ಸರ್ವಕಾಲಿಕ ದಾರಿ ದೀಪವಾಗಿವೆ ಎಂದರು.

ಸಾನಿಧ್ಯ ವಹಿಸಿದ ಸ್ಥಳಿಯ ವಿರಕ್ತಮಠದ ಷಡಕ್ಷರಿ ಸ್ವಾಮೀಜಿ ಆಶಿರ್ವಚನ ನೀಡಿದರು

ಕಾರ್ಯಕ್ರಮದಲ್ಲಿ ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿ ಅಶೋಕ ರಾಠೋಡ, ಪ.ಪಂ. ಮಾಜಿ ಅಧ್ಯಕ್ಷ ಬಾಬುಗೌಡ ಪಾಟೀಲ, ಚಡಚಣ ಮಂಡಲ ಬಿಜೆಪಿ ಅಧ್ಯಕ್ಷ ಕಾಂತುಗೌಡ ಪಾಟೀಲ, ಮುಖಂಡರಾದ ದೇವೇಂದ್ರಪ್ಪ ಪಾಟೀಲ, ಸೋಮು ಬಡಿಗೇರ, ಭೀಮಾಶಂಕರ ಆಲಕುಂಟೆ, ಎಂ.ಆರ್.ಹಿಟ್ನಳ್ಳಿ, ಮೊನಪ್ಪ ಬಡಿಗೇರ,ವಿಶ್ವನಾಥ ಪಾಟೀಲ, ಪ್ರಭಾಕರ ನಿರಾಳೆ, ರಾಜು ಡೋಣಗಾಂವ, ಕಾಸು ಮುಂಡೊಡಗಿ, ಅಶೋಕ ಕುಲಕರ್ಣಿ, ಮಹಾದೇವ ಯಂಕಂಚಿ, ಪ.ಪಂ. ಸದಸ್ಯರಾದ ರಾಜು ಕೋಳಿ, ಪ್ರಕಾಶಗೌಡ ಪಾಟೀಲ, ಬಾಲಾಜಿ ಗಾಡಿವಡ್ಡರ, ಚೇತನ ನಿರಾಳೆ ಸೇರಿದಂತೆ ಗ್ರಾಮಸ್ಥರು ಇದ್ದರು.

# ಬಸವ ಜಯಂತಿ: ಸಚಿವರಿಂದ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಸವ ಜಯಂತಿ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರು ಸೋಮವಾರ ಬೆಳಿಗ್ಗೆ ಇಲ್ಲಿನ ಬಸವೇಶ್ವರ ವೃತ್ತದಲ್ಲಿರುವ ವಿಶ್ವಗುರು ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ವಿಶ್ವ ಗುರು ಬಸವಣ್ಣನವರು ಜನಿಸಿದ ವಿಜಯಪುರ ಜಿಲ್ಲೆಯಲ್ಲಿ ಬಸವಣ್ಣನವರ ಜಯಂತಿಯನ್ನು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲಾಗುತ್ತಿದೆ. ಇವರ ಜಯಂತಿಯನ್ನು ಎಲ್ಲ ಸಮುದಾಯದವರೆಲ್ಲ ಸೇರಿ ವಿಜೃಂಭಣೆಯಿಂದ ಆಚರಿಸುತ್ತಿದ್ದೇವೆ. ಬಸವನಬಾಗೇವಾಡಿಯಿಂದ ಬಸವಜ್ಯೋತಿ ಯಾತ್ರೆಯೂ ಆಗಮಿಸುತ್ತಿದೆ ಎಂದರು.

ಇಡೀ ವಿಶ್ವಕ್ಕೆ ತಮ್ಮ ವಚನಗಳ ಮೂಲಕ ಉತ್ತಮ ಸಂದೇಶ ನೀಡಿದ ಬಸವಣ್ಣನವರು ಶ್ರೇಷ್ಠ ದಾರ್ಶನಿಕರು, ಅವರಿಗೆ ಜನ್ಮನೀಡಿದ ಹಾಗೂ ಅವರ ಕರ್ಮಭೂಮಿ ಬಸವಕಲ್ಯಾಣ ಸೇರಿದಂತೆ ಎಲ್ಲೆಡೆಯೂ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ.ಕೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಮಾಜದ ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಕೊಲ್ಹಾರ: ರೈತರ ಮುಖದಲ್ಲಿ ಮಂದಹಾಸ ಮೂಡಿಸಿದ ಮಳೆ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಬಿಸಿಲಿನ ತಾಪದಿಂದ ಕಂಗೆಟ್ಟಿದ್ದ ಜೀವಜಾಲಕ್ಕೆ ರವಿವಾರ ಪಟ್ಟಣದಲ್ಲಿ ಸುರಿದ ಮಳೆಯು ತಂಪು ನೀಡಿತು. ಸತತವಾಗಿ ಒಂದು ಗಂಟೆಗೂ ಹೆಚ್ಚು ಕಾಲ ಸುರಿದ ಮಳೆಯಿಂದ ಪಕ್ಷಿ–ಪ್ರಾಣಿಗಳು ಹಾಗೂ ಜನರಿಗೆ ನಿರಾಳತೆ ಸಿಕ್ಕಿದ್ದು, ರೈತರ ಮುಖದಲ್ಲಿ ಮಂದಹಾಸ ಮೂಡಿಸಿದೆ.

ಈ ಮೊದಲ ಮಳೆಯಿಂದ ಜಾನುವಾರುಗಳಿಗೆ ಮೇವು, ನೀರಿನ ಸೌಲಭ್ಯ ದೊರೆಯುವಂತಾಗಿದ್ದು, ರೈತರು ಹಾಗೂ ಪಟ್ಟಣದ ನಾಗರಿಕರು ಸಂತೋಷ ವ್ಯಕ್ತಪಡಿಸಿದ್ದಾರೆ.

ಆದರೆ, ಬಿರುಗಾಳಿ ಸಹಿತ ಸುರಿದ ಮಳೆಯಿಂದ ಪಟ್ಟಣದಲ್ಲಿ ಕೆಲವೆಡೆ ಅನಾಹುತಗಳು ಸಂಭವಿಸಿವೆ. ಇಂದಿರಾ ಕ್ಯಾಂಟಿನ್ ಮುಂಭಾಗದ ರಸ್ತೆಯ ಮಧ್ಯದಲ್ಲಿ ಮರ ಹಾಗೂ ವಿದ್ಯುತ್ ಕಂಬಗಳು ಧರೆಗೆ ಉರುಳಿದರೆ, ಕೆಲವು ಮನೆಗಳ ಮುಂದಿನ ಶೀಟ್‌ಗಳು ಹಾರಿಹೋದ ಘಟನೆಗಳು ನಡೆದಿವೆ.

ವಿದ್ಯುತ್ ಕಂಬಗಳು ಧರೆಗೆ ಉರುಳಿದ ವೇಳೆ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ತಹಶೀಲ್ದಾರ ಸಂತೋಷ ಮ್ಯಾಗೇರಿ ಹಾಗೂ ಹೆಸ್ಕಾಂ ಅಧಿಕಾರಿ ಎಸ್.ಎಸ್. ಪಡಸಲಗಿ ಮಾಹಿತಿ ನೀಡಿದ್ದಾರೆ.

ಇದಲ್ಲದೆ, ತಾಲೂಕಿನ ರೋಣಿಹಾಳ ಮತ್ತು ಮಲಘಾಣ ಗ್ರಾಮದ ಭಾಗಗಳಲ್ಲಿ ಕೆಲವೆಡೆ ಆಲಿಕಲ್ಲು ಮಳೆಯೂ ದಾಖಲಾಗಿದೆ.

# ದಯವೇ ಧರ್ಮದ ಮೂಲ ಸಂದೇಶ ಸಾರಿದ ಬಸವಣ್ಣ : ಕುಂಬಾರ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ:ಮಹಾಮಾನವತಾವಾದಿ ಬಸವಣ್ಣನವರು 12 ನೇಯ ಶತಮಾನದ ಮಹಾನ್ ಕ್ರಾಂತಿಕಾರಿ, ಸಮಾಜ ಸುಧಾರಕ ಮತ್ತು ತತ್ವಜ್ಞಾನಿಯಾಗಿದ್ದರು. ಅವರು ತನ್ನ ವಚನಗಳ ಮೂಲಕ ಸಮಾಜದಲ್ಲಿನ ಜಾತಿ, ಲಿಂಗ ತಾರತಮ್ಯ ಮತ್ತು ಮೌಢ್ಯತೆಗಳನ್ನು ಕಠೋರವಾಗಿ ವಿರೋಧಿಸುತ್ತಾ, ಸಮಾನತೆ ಮತ್ತು ಕಾಯಕ ನಿಷ್ಠೆಯನ್ನು ಬೋಧಿಸಿದ ಸಾಮಾಜಿಕ ಕ್ರಾಂತಿಯ ಹ–ರಿಕಾರರಾಗಿದ್ದರು. ಧರ್ಮದ ಮೂಲ ಎಂಬ ಸಂದೇಶ ಸಾರುತ್ತಾ, ಸಾಮಾಜಿ–ಕ ಜಾಗೃತಿ ಮೂಡಿಸುತ್ತಾ, ಸಮ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿದವರು ಎಂದು ಹೊನ್ನುಟಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಬಸವರಾಜ ಕುಂಬಾರ ಅಭಿಪ್ರಾಯಪಟ್ಟರು.

ಅವರು ನಗರದ ನವಭಾಗದಲ್ಲಿರುವ ಸರ್ಕಾರಿ ಪ್ರಥ–'ಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ ವಿಭಾಗದಡಿಯಲ್ಲಿ "ವಿಶ್ವಗುರು ಬಸವಣ್ಣ ಅವರ ಜಯಂತಿ" ಕಾರ್ಯಕ್ರಮದಲ್ಲಿ ಬಸವಣ್ಣನವರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತಿದ್ದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡ. ಎ.ಐ.ಹಂಜಗಿ ಅವರು ಮಾತನಾಡಿ, ವಿಶ್ವಗುರು ಬಸವಣ್ಣನವರ ವಚನಗಳ ಸಂದೇಶದ ಸಾರವನ್ನು ಜನರಿಗೆ ತಿಳಿಸಕೊಡಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ ಎಂದರು.

ಸಾಂಸ್ಕೃತಿಕ ವಿಭಾಗದ ಸಂಚಾಲಕ ಡಾ. ಚಂದ್ರಕಾಂತ.ಬಿ. ವೇದಿಕೆಯ ಮೇಲಿದ್ದರು.

ಈ ಕಾರ್ಯಕ್ರಮದಲ್ಲಿ ಬಸವ ಜಯಂತಿ ಅಂಗವಾಗಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಸಾಂಸ್ಕೃತಿಕ ನಾಯಕ–ಬಸವಣ್ಣ ವಿಷಯ ಕುರಿತು ಪ್ರಬಂಧ ಮತ್ತು ಬಸವಣ್ಣನವರ ವೈಚಾರಿಕ ಮತ್ತು ಮೌಲ್ವಿಕ ಚಿಂತನೆಗಳು ವಿಷಯ ಕುರಿತು ಏರ್ಪಡಿಸಿದ ಭಾಷಣ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯಿತು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಚಿದಾನಂದ ಆನೂರ ನಿರೂಪಿಸಿದರು. ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಎಂ.ಎಸ್.ಖೊದ್ನಾಪೂರ ಅತಿಥಿಗಳ ಪರಿಚಯಿಸಿದರು. ಡಾ. ಚಂದ್ರಕಾಂತ. ಬಿ. ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕಿ ರೂಪಾ ಕಮದಾಳ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಸುನೀಲ ತೋಂಟಾಪೂರ, ಡಾ. ವಿಶಾಲಾಕ್ಷಿ ಹೊನ್ನಾಕಟ್ಟಿ, ಡಾ. ಬಸನಗೌಡ ಶಾಡದಳ್ಳಿ, ಡಾ. ಎಸ್.ಬಿ.ಕಬಾಡೆ,ಡಾ. ದೇವೇಂದ್ರಗೌಡ, ಡಾ. ರಾಜಶ್ರೀ ಮಾರನೂರ, ಡಾ.ಮಮತಾ ಬನ್ನೂರ, ಪ್ರೊ. ವಲ್ಲಭ ಕಬಾಡೆ, ಪ್ರೊ. ಸಿದ್ರಾಮ ಯರನಾಳ, ಪ್ರೊ. ಸಂಗಮೇಶ ಗುರವ, ಪ್ರೊ. ವಿನೋದ ಹುಲ್ಲೂರ, ಕಛೇರಿ ಅಧೀಕ್ಷಕಿ ಶ್ರೀಮತಿ ಸರ್ವಶ್ರೀ ಚಟ್ಟೇರ ಇನ್ನಿತರರು ಸೇರಿದಂತೆ ಕಾಲೇಜಿನ ಎಲ್ಲ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿದ ಮಹಾನ್ ಚಿಂತಕ ಬಸವಣ್ಣ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ ಜಮಖ–ಂಡಿಯಲ್ಲಿ ಸೋಮವಾರ ಸಾಂಸ್ಕೃತಿಕ ವಿಭಾಗ ಹಾಗೂ ಐ.ಕ್ಯೂ.ಎ.ಸಿ. ಇವರ ಸಂಯುಕ್ತ ಆಶ್ರಯದಲ್ಲಿ "ಸಾಂಸ್ಕೃತಿ–ಕ ನಾಯಕ ವಿಶ್ವಗುರು ಬಸವಣ್ಣನವರ 893ನೇ ಬಸವ ಜಯಂತಿ"ಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ವೈ. ವೈ. ಕೊಕ್ಕನವರ, ಕನ್ನಡ ಸಹ ಪ್ರಾಧ್ಯಾಪಕರು ಇವರು ಮಾತನಾಡುತ್ತಾ "ವಿಶ್ವಗುರು ಬಸವಣ್ಣನವರು 12ನೇ ಶತಮಾನದ ಮಹಾನ್ ಸಮಾಜ ಸುಧಾರಕರಾಗಿ, ಸಮಾನತೆ, ಶ್ರಮದ ಗೌರವ ಮತ್ತು ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿದ ಮಹಾನ್ ಚಿಂತಕರು. ಅವರು ಕಲ್ಯಾಣದಲ್ಲಿ ಅನೇಕ ಸಾಮಾಜಿಕ ಕ್ರಾಂತಿಗಳನ್ನು ಮಾಡಿ 'ಅನುಭವ ಮಂಟಪ'ದ ಮೂಲಕ ಎಲ್ಲ ವರ್ಗದ ಜನರಿಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುವ ವೇದಿಕೆಯನ್ನು ನಿರ್ಮಿಸಿದರು.

ಅವರ ವಚನ ಸಾಹಿತ್ಯವು ಸಮಾಜದ ಅಂ–ಧಶ್ರದ್ಧೆಗಳನ್ನು ನಿವಾರಿಸಿ. ಸತ್ಯ, ಧರ್ಮ ಹಾಗೂ ನೈತಿ–ಕತೆಯ ಮಾರ್ಗವನ್ನು ತೋರಿಸುತ್ತದೆ. ಬಸವಣ್ಣನವರ ಸಾಧನೆಗಳು ಇಂದಿಗೂ ಸಮಾಜಕ್ಕೆ ದೀಪಸ್ತಂಭವಾಗಿವೆ" ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಸುನಂದಾ ಎಸ್. ಶಿರೂರ ಮಾತನಾಡುತ್ತಾ "ಬಸವಣ್ಣನವರ ಜೀವನ ಹಾಗೂ ತತ್ವಗಳು ನಮ್ಮೆಲ್ಲರಿಗೂ ಪ್ರೇರಣೆಯಾಗಿವೆ ಎಂದರು.

ಮೌನೇಶ ಬಡಿಗೇರ ಪ್ರಾರ್ಥಿಸಿದರು. ಡಾ. ಎ. ವಾಯ್. ಕಾಂಬಳಿ ನಿರೂಪಿಸಿದರು. ಎಸ್. ಪಿ. ಆಲಗೂರ ಸ್ವಾಗತಿಸಿದರು. ಎಸ್. ಕೆ. ಡೇಂಬರೆ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ವಿ. ಆರ್. ದಳವಾಯಿ, ಡಾ. ಎಮ್. ಎಮ್. ಮಂಟೂರ, ಎ. ಎಸ್. ಪೂಜಾರಿ, ಆರ್. ಹೆಚ್. ಹಳ್ಳಿ, ಆರ್. ಎಸ್. ಜಾಧವ. ಡಾ. ಬಿ. ಎನ್. ಜಾಧವ, ಎಸ್. ಪಿ. ಸಜ್ಜನ ಉಪಸ್ಥಿತರಿದ್ದರು.

## ಏ.22ರಂದು ವಿಶೇಷ ಆಧ್ಯಾತ್ಮಿಕ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದಲ್ಲಿ ಜೈ ಹನುಮಾನ ಯುವ ಮಿತ್ರ ಮಂಡಳಿಯವರ ವತಿಯಿಂದ ವಿಶೇಷ ಆಧ್ಯಾತ್ಮಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಗ್ರಾಮಸ್ಥರಲ್ಲಿ ಭಕ್ತಿಭಾವ ಹೆಚ್ಚಿಸುವ ಉದ್ದೇಶದಿಂದ ಈ ಕಾರ್ಯಕ್ರಮ ನಡೆಯಲಿದೆ.

"ಪಾರಂಪರಿಕ ಕೃಷಿ ಪದ್ಧತಿ ಹಾಗೂ ಸಾವಯವ ಕೃಷಿ" ಕುರಿತ ವಿಶೇಷ ಉಪನ್ಯಾಸವನ್ನ ಅದೃಶ್ಯ ಕಾಡಸಿದೇಶ್ವರ ಶ್ರೀಗಳು ಕನ್ನೇರಿ ಮಠ ಕೋಲ್ಲಾಪೂರ ಮತ್ತು ಮಾತೋಶ್ರೀ ಅಕ್ಕಮಹಾದೇವಿ ತಾಯಿಯವರು ಕಮರಿಮಠ ಚಿಕ್ಕಪಡಸಲಗಿ ಪುರ್ನವಸತಿ ಕೇಂದ್ರ ಆಗಮಿಸಿ ಆಶೀರ್ವಚನ ನೀಡಲಿದ್ದಾರೆ.

ಕಾರ್ಯಕ್ರಮವು ಬುಧವಾರ ಏಪ್ರಿಲ್ 22 ರಂದು ಸಂಜೆ 6.00 ಗಂಟೆಗೆ ಶ್ರೀ ಹನುಮಾನ ದೇವಸ್ಥಾನ ಅವರಣ, ಚಿಕ್ಕಪಡಸಲಗಿಯಲ್ಲಿ ನಡೆಯಲಿದೆ. ಭಕ್ತರು ಹಾಗೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉಪನ್ಯಾಸದ ಪ್ರಯೋಜನ ಪಡೆದುಕೊಳ್ಳುವಂತೆ ಸಂಘಟಕರು ಮನವಿ ಮಾಡಿದ್ದಾರೆ.

# ವಿಶ್ವ ಭ್ರಾತೃತ್ವ ಸಾರಿದ ಬಸವಣ್ಣನವರು : ಪ್ರೊ.ಹೂಗಾರ

## ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ವಿಶ್ವಗುರು ಜಗಜ್ಯೋತಿ ಬಸವಣ್ಣವರ ಜಯಂತಿ ಆಚರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ಇತಿಹಾಸ ವಿಭಾಗದ ಸಹಯೋಗದಲ್ಲಿ ವಿಶ್ವಗುರು ಬಸವ ಜಯಂತಿ ಆಚ–ರಿಸಲಾಯಿತು.

ಈ ವೇಳೆಯಲ್ಲಿ ಇತಿಹಾಸ ವಿಭಾಗದ ಮುಖಸ್ಥ ಪ್ರೊ.ಐ.ಎಸ್.ಹೂಗಾರ ಮಾತನಾಡಿ, 12 ನೇ ಶತಮಾನದಲ್ಲಿ ಬಸವಣ್ಣವರು ತಮ್ಮ ವಚನಗಳ ಸಾಹಿತ್ಯದ ಮೂಲಕ ಸಮಾಜವನ್ನು ತಿದ್ದುವ ಕಾರ್ಯ ಮಾಡಿದ್ದಾರೆ. ಅಂದಿನ ಪ್ರಥಮ ಸಂಸತ್ತು ಅನುಭವ ಮಂಟಪವನ್ನು ಸ್ಥಾಪಿಸಿ ಜಾತಿ, ಲಿಂಗ, ಮತ್ತು ಮತ ಭೇಟಿಜಜಜಿಟಿಜಜದವನ್ನು ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಿ ವಿಶ್ವ ಭಾತೃತ್ವ ಸಾರಿದವರು, ಬಸಣ್ಣನವರ ವಿಚಾರಧಾರೆಗಳನ್ನು ನಮ್ಮಲ್ಲಿ ಅಳಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಡಾ.ಉಷಾದೇವಿ ಹಿರೇಮಠ ಮಾತನಾಡಿ, ಬಸವ ನಾಡಿನಲ್ಲಿ ಬದುಕುತ್ತಿರುವ ನಾವು ಸೌಭಾಗ್ಯವಂತರು, ಬಸಣ್ಣನವರು ವಚನ ಸಾಹತ್ಯಕೆ ನೀಡಿದ ಕೊಡುಗೆ ಅಪಾರವಾದದ್ದು ಎಂದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ.ಅನೀಲ ಭಿ.ನಾಯಕ, ಐಕ್ಯೂಎಸಿ ಸಂಯೋಜಕ ಡಾ.ಪಿ. ಎಸ್.ಪಾಟೀಲ, ಡಾ.ಧರ್ಮಗುರು ಪ್ರಸಾದ್, ಪ್ರೊ. ಗುರುರಾಜ್ ಎನ್.ಕುಲಕರ್ಣಿ, ಡಾ.ತರನ್ನುಮ್ ಜಬೀನ ಖಾನ್, ಇನ್ನಿತರ ಮಹಾವಿದ್ಯಾಲಯದ ಬೋಧಕ,ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಫಲಾನುಭವಿಗಳಿಗೆ ಮೀನುಗಾರಿಕೆ ಉಚಿತ ಕಿಟ್ ಮತ್ತು ಲೈಫ್ ಜಾಕೇಟುಗಳ ವಿತರಣೆ

## ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲರಿಂದ ಫಲಾನುಭವಿಗಳಿಗೆ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಬಲೇಶ್ವರ ಮತಕ್ಷೇತ್ರದ ನಾನಾ ಫಲಾನುಭವಿಗಳಿಗೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ಸೋಮವಾರ ಮೀನುಗಾರಿಕೆ ಉಚಿತ ಕಿಟ್ ಮತ್ತು ಲೈಫ್ ಜಾಕೇಟುಗಳನ್ನು ವಿತರಿಸಿದರು.

ರಾಜ್ಯ ವಲಯ ಮತ್ತು ಜಿಲ್ಲಾ ಪಂಚಾಯಿತಿ ಯೋಜನೆಯಡಿ ಒಟ್ಟು 61 ಜನ ಫಲಾನುಭವಿಗಳು ಆಯ್ಕೆಯಾಗಿದ್ದು, ಅವರಲ್ಲಿ 11 ಫಲಾನುಭವಿಗಳಿಗೆ ಸಚಿವರು ಸಾಂಕೇತಿಕವಾಗಿ ಕಿಟ್ ಮತ್ತು ಲೈಫ್ ಜಾಕೇಟ್ ವಿತರಿಸಿದರು.

ಈ ಯೋಜನೆಯಡಿ ಬಬಲೇಶ್ವರ ತಾಲೂಕಿನ ಕೃಷ್ಣಾ ನದಿಯಲ್ಲಿ ಮೀನುಗಾರಿಕೆ ನಡೆಸುವ ಜೈನಾಪುರ, ಬಬಲಾದ, ದೇವರಗೆಣ್ಣೂರು, ಬೆಳ್ಳುಬ್ಬಿ, ಕಣಬೂರು, ಸುತಗುಂಡಿ, ತಿಕೋಟಾ ತಾಲೂಕಿನ ಕೆರೆಯಲ್ಲಿ ಮೀನುಗಾರಿಕೆ ನಡೆಸುವ ಬರಟಗಿ, ಅರಕೇರಿ, ಮಖಣಾಪುರ ಗ್ರಾಮದ ಮೀನುಗಾರ–ರಿಗೆ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಎಂ. ಎಚ್. ಭಾಂಗಿ, ಸಹಾಯಕ ನಿರ್ದೇಶಕ ಶ್ರೀಶೈಲ ಎಸ್. ಗಂಗನಳ್ಳಿ, ಡೋಮನಾಳ ಮೀನುಗಾರಿಕೆ ಸಹಕಾರಿ ಸಂಘದ ಅಧ್ಯಕ್ಷ ಶ್ರೀರಾಮಸಿಂಗ್ ರಾಠೋಡ ಸೇ–ರಿದಂತೆ ಪದಾಧಿಕಾರಿಗಳು, ಇಲಾಖೆ ಸಿಬ್ಬಂದಿ ಉಪಸ್ಥಿತ–ರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR